# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 251 | Volume - 01 Issue - 251
ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | Title- Code: KARKAN 28269
ಚಿತ್ರದುರ್ಗ | Chitradurga
ದಿನಾಂಕ: 25–04–2024 ಗುರುವಾರ | Date: 25-04-2024 Thursday
ಪುಟ: 4 | Page: 4
ಬೆಲೆ : ರೂ.2–00 | Price: Rs. 2-00



ಒಳಪುಟದ ಸುದ್ದಿಗಳು

ಪ್ಲಾಸ್ಟಿಕ್ ಮುಕ್ತ ಮಾಡಲು ಸಂಕಲ್ಪ ಮಾಡೋಣ: ಆಯುಕ್ತೆ ಎಂ.ರೇಣುಕಾ 2

ದೇಶದ ಜನ ನೆಮ್ಮದಿಂದ ಬದುಕಬೇಕಾದರೆ, ಬಿಜೆಪಿ ಬೆಂಬಲಿಸಿ: ಏಸ್.ಲಿಂಗಮೂರ್ತಿ 3

ದಾವಣಗೆರೆ; ಅಂತಿಮ ಕಣದಲ್ಲಿ 30 ಅಭ್ಯರ್ಥಿ: ಚುನಾವಣಾಧಿಕಾರಿ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಮದ್ಯ ಮಾರಾಟ ನಿಷೇಧ

» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಏಪ್ರಿಲ್ 26ರಂದು ಮತದಾನ ನಡೆಯಲಿದೆ. ಮತದಾನ ದಿನ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಏಪ್ರಿಲ್ 24ರ ಸಂಜೆ 6 ಗಂಟೆಯಿಂದ ಏಪ್ರಿಲ್ 26 ಮಧ್ಯರಾತ್ರಿ 12 ಗಂಟೆಯವರೆಗೆ ಜಿಲ್ಲೆಯಾದ್ಯಂತ ಮದ್ಯ ಮಾರಾಟ ಮಾಡುವುದನ್ನು ನಿಷೇಧಿಸಿ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ, ಜಿಲ್ಲಾ ದಂಡಾಧಿಕಾರಿ ಟಿ.ವೆಂಕಟೇಶ್ ಆದೇಶಿಸಿದ್ದಾರೆ.
ಎಲ್ಲಾ ಮದ್ಯದ ಅಂಗಡಿಗಳನ್ನು ಮುಚ್ಚುಬೇಕು. ಯಾವುದೇ ತರಹದ ಬಾರ್ ಅಂಡ್ ರೆಸ್ಟೋರೆಂಟ್, ಕ್ಲಬ್ ಮತ್ತು ಹೋಟೆಲ್, ಡಾಬಾ ಗಳಲ್ಲಿ ಮದ್ಯ ಸಾಗಾಣಿಕೆ, ಶೇಖರಣೆ ಮತ್ತು ಮದ್ಯ ಮಾರಾಟ ಮಾಡುವಂತಿಲ್ಲ. ಆದೇಶ ಉಲ್ಲಂಘಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಸಿದ್ದಾರೆ.

### ಮತದಾನದ ದಿನ, ಮತ ಎಣಿಕೆ ದಿನದಂದು ಸಂತೆ, ಜಾತ್ರೆ, ಉತ್ಸವ ನಿಷೇಧ

» ಚಿತ್ರದುರ್ಗ

ಲೋಕಸಭಾ ಚುನಾವಣೆ–2024ರ ಹಿನ್ನಲೆಯಲ್ಲಿ ಇದೇ ಏಪ್ರಿಲ್ 26ರಂದು ಮತದಾನದ ದಿನ ಹಾಗೂ ಜೂನ್ 4ರಂದು ಮತ ಎಣಿಕೆ ದಿನದಂದು ಬೆಳಿಗ್ಗೆ 5 ರಿಂದ ಸಂಜೆ 7 ರವರೆಗೆ ಚಿತ್ರದುರ್ಗ ಜಿಲ್ಲೆಯಾದ್ಯಂತ ನಡೆಯಲಿರುವ ಎಲ್ಲಾ ಬಗೆಯ ಸಂತೆ, ಜಾತ್ರೆ, ಉತ್ಸವ ನಡೆಸದಂತೆ ನಿಷೇಧಿಸಿ ಜಿಲ್ಲಾಧಿಕಾರಿ, ಜಿಲ್ಲಾ ದಂಡಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ಆದೇಶಿಸಿದ್ದಾರೆ. ಲೋಕಸಭಾ ಚುನಾವಣೆಯನ್ನು ಸುಸೂತ್ರವಾಗಿ ನಡೆಸಲು ಮತ್ತು ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಜಿಲ್ಲೆಯಾದ್ಯಂತ ಏಪ್ರಿಲ್ 26 ರಂದು ಮತದಾನದ ದಿನ ಹಾಗೂ ಜೂನ್ 4ರಂದು ಮತ ಎಣಿಕೆ ದಿನದಂದು ನಡೆಯುವ ಸಂತೆ, ಜಾತ್ರೆ ಹಾಗೂ ಉತ್ಸವವನ್ನು ನಿಷೇಧಿಸಿ ಜಿಲ್ಲಾಧಿಕಾರಿ, ಜಿಲ್ಲಾ ದಂಡಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ಆದೇಶ ಹೊರಡಿಸಿದ್ದಾರೆ.

### ಏ.26ರಂದು ಮತದಾನ: ಪ್ರತಿಬಂಧಕಾಜ್ಞೆ ಜಾರಿ

» ಚಿತ್ರದುರ್ಗ

ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನಲೆಯಲ್ಲಿ ಏ.26 ರಂದು ಚಿತ್ರದುರ್ಗ ಜಿಲ್ಲೆಯಲ್ಲಿ ಮತದಾನ ಜರುಗಲಿದೆ. ಮತದಾರರಿಗೆ ಬೆದರಿಕೆ, ಆಸೆ ಆಮಿಷ ಒಡ್ಡುವುದನ್ನು ತಡೆಯಲು ಏಪ್ರಿಲ್ 24 ರಂದು ಸಂಜೆ 6 ಗಂಟೆಯಿಂದ ಏಪ್ರಿಲ್ 26 ರಂದು ಮತದಾನ ಮುಗಿಯುವವರೆಗೆ ಜಿಲ್ಲೆಯಾದ್ಯಂತ ಸಿಆರ್‌ಪಿಸಿ 144 ಸೆಕ್ಷನ್ ಜಾರಿ ಮಾಡಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ಆದೇಶ ಹೊರಡಿಸಿದ್ದಾರೆ. ಮತದಾನ ಕೊನೆಗೊಳ್ಳುವ 48 ಗಂಟೆಗಳ ಮುನ್ನವೇ ಬಹಿರಂಗ ಪ್ರಚಾರ ಅಂತ್ಯಗೊಳ್ಳಲಿದೆ. ನಂತರ ಅಭ್ಯರ್ಥಿಗಳು ಮನೆ ಮನೆ ಪ್ರಚಾರ ಕೈಗೊಳ್ಳಬಹುದು. ಕಾನೂನು ಸುವ್ಯವಸ್ಥೆಗೆ ಭಂಗ ತರುವ ಯಾವುದೇ ಕಾರ್ಯಗಳನ್ನು ಯಾರು ಕೂಡ ಮಾಡುವಂತಿಲ್ಲ. 5 ಜನರಿಗಿಂತ ಹೆಚ್ಚಿನ ಸಂಖ್ಯೆಯ ಜನರು ಸೇರುವಂತಿಲ್ಲ. ಆದೇಶ ಉಲ್ಲಂಘಿಸುವವರ ವಿರುದ್ಧ ಐಪಿಸಿ ಸೆಕ್ಷನ್ 188ರ ಪ್ರಕಾರ ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

### ಮಲೇರಿಯಾ ದಿನಾಚರಣೆ ಅಂಗವಾಗಿ ಜಾಥಾ

» ದಾವಣಗೆರೆ

ಏಪ್ರಿಲ್ 25 ರಂದು ವಿಶ್ವ ಮಲೇರಿಯಾ ದಿನವನ್ನು ಆಚರಿಸಲಾಗುತ್ತಿದೆ. ಇದರ ಅಂಗವಾಗಿ ಏಪ್ರಿಲ್ 26 ರಂದು ಬೆಳಿಗ್ಗೆ 9.30ಕ್ಕೆ ನಗರದ ಚಿಗಟೇರಿ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಜಾಥಾ ಏರ್ಪಡಿಸಲಾಗಿದೆ.

## ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಹೆಚ್ಚುತ್ತಿರುವ ಬಿಜೆಪಿ ವರ್ಚಸ್ಸು

# ಈ ಬಾರಿ ಜನರ ಆಯ್ಕೆ ಬಿಜೆಪಿ: ಕಾರಜೋಳ

» ಚಳ್ಳಕೆರೆ



ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗೋವಿಂದಕಾರಜೋಳ ಚುನಾವಣೆ ಬಹಿರಂಗ ಪ್ರಚಾರಕ್ಕೆ ಅಂತಿಮ ದಿನವಾದ ಬುಧವಾರವೂ ಸಹ ಬಿರುಸಿನ ಪ್ರಚಾರ ನಡೆಸಿ ಬಿಜೆಪಿ ಪಕ್ಷಕ್ಕೆ ಮತ ನೀಡಿ ಮೋದಿಯವರಿಗೆ ಶಕ್ತಿ ತುಂಬುವಂತೆ ಮತದಾರರಲ್ಲಿ ವಿನಂತಿಸಿದರು.

ಅವರು, ಬುಧವಾರ ತಳಕು ಗ್ರಾಮದಲ್ಲಿ ವಾಲ್ಮೀಕಿ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿ, ಭಾರತೀಯ ಜನತಾ ಪಕ್ಷ ಕಳೆದ ದಶಕಗಳಿಂದ ಜನರ ಕಲ್ಯಾಣಕ್ಕಾಗಿ ಶ್ರಮಿಸುತ್ತದೆ. ಕಳೆದ ಹತ್ತು ವರ್ಷಗಳಿಂದ ಪ್ರಧಾನಿಯಾಗಿ ಆಡಳಿತ ನಡೆಸುತ್ತಿರುವ ನರೇಂದ್ರಮೋದಿ ಆಡಳಿತದಲ್ಲಿ ಯಾವುದೇ ಕಪ್ಪುಚುಕ್ಕಿ ಇಲ್ಲ, ಇಡೀ ವಿಶ್ವವೇ ಇಂದು ಭಾರತದತ್ತ ನೋಡುವಂತೆ ಮಾಡಿದ್ದು ಮೋದಿ, ಎಸ್ಟಿ, ಎಸ್ಸಿ, ಸಾಮಾನ್ಯ,ಹಿಂದುಳಿದ ವರ್ಗಗಳ ಕಲ್ಯಾಣಕ್ಕೆ ಹಲವಾರು ಯೋಜನೆಗಳನ್ನು ರೂಪಿಸಿದ ಕೀರ್ತಿ ಮೋದಿಯದ್ದು ಎಂದರು. ಬಿಜೆಪಿ ಎಸ್ಟಿ ಮೋರ್ಚಾ ರಾಜ್ಯಾಧ್ಯಕ್ಷ ಬಂಗಾರುಹನುಮಂತು ಮಾತನಾಡಿ, ಭಾರತೀಯ ಜನತಾ ಪಕ್ಷ ಯಾವುದೇ ಚುನಾವಣೆಯಲ್ಲಿಯಾಗಲಿ ತಾನು ನೀಡಿದ ಭರವಸೆಯನ್ನು ಈಡೇರಿಸುವಲ್ಲಿ ಹಿಂದೆ ಬಿದ್ದಿಲ್ಲ. ಪಕ್ಷ ವರಿಷ್ಠರು ನೀಡುವ ಸೂಚನೆಯನ್ನು ಕಡ್ಡಾಯವಾಗಿ ಪಾಲಿಸಲಾಗುತ್ತದೆ ಎಂದರು. ಮಾಜಿ ಶಾಸಕ ಎಸ್.ತಿಪ್ಪೇಸ್ವಾಮಿ ಮಾತನಾಡಿ, ಕಾಂಗ್ರೆಸ್ ಪಕ್ಷದ ಕೆಲ ಮುಖಂಡರು ಗೋವಿಂದಕಾರಜೋಳ ಹೊರಗಿನ ಅಭ್ಯರ್ಥಿ ಎಂದು ಪ್ರಚಾರ ಮಾಡುತ್ತಾರೆ. ಅವರು ಏನು ಎಂದು ತಿಳಿದುಕೊಂಡಿಲ್ಲ. ಇಡೀ ಚಿತ್ರದುರ್ಗ ಲೋಕಸಭಾ ಕ್ಷೇತ್ರ ಬಿಜೆಪಿಯ ಪರವಾಗಿದೆ. ಈ ಬಾರಿ ಈ ಜಿಲ್ಲೆಯಲ್ಲಿ ಅಭ್ಯರ್ಥಿ ಗೋವಿಂದಕಾರಜೋಳ ಸಂಸತ್‌ಗೆ ಪ್ರವೇಶ ಗ್ಯಾರಂಟಿ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಎಸ್ಟಿ ಮೋರ್ಚಾ ಅಧ್ಯಕ್ಷ ಶಿವಣ್ಣ ವಹಿಸಿದ್ದರು. ತಳಕು–ನಾಯಕಹಟ್ಟಿ ಮಂಡಲಾಧ್ಯಕ್ಷ ಈ.ರಾಮರೆಡ್ಡಿ, ಪ್ರಧಾನ ಕಾರ್ಯದರ್ಶಿ ಚನ್ನಗಾನಹಳ್ಳಿಮಲ್ಲೇಶ್, ಎಸ್ಟಿ ಮೋರ್ಚಾರಾಜ್ಯ ಉಪಾಧ್ಯಕ್ಷ ಆರ್.ಅನಿಲ್‌ಕುಮಾರ್, ಕೆ.ಟಿ.ಕುಮಾರಸ್ವಾಮಿ, ಡಾ.ಮಂಜುನಾಥ, ಬೆಂಕಿಗೋವಿಂದಪ್ಪ, ಜೆಡಿಎಸ್ ಮುಖಂಡ ವೀರಭದ್ರಪ್ಪ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಓಬಳೇಶ್, ಮಂಜುನಾಥ ಭಾಗವಹಿಸಿದ್ದರು.

# ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಈ ಬಾರಿ ಕಾಂಗ್ರೆಸ್ ಅಭ್ಯರ್ಥಿಗೆ ಗೆಲುವು: ರಘುಮೂರ್ತಿ

» ಚಳ್ಳಕೆರೆ



ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಅತಿಹೆಚ್ಚು ಮತಗಳಿಂದ ಜಯಶೀಲರಾಗುವರು. ವಿಶೇಷವಾಗಿ ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಪಕ್ಷದ ಪರವಾಗಿ ಪ್ರತಿನಿತ್ಯ ನೂರಾರು ಕಾರ್ಯಕರ್ತರು, ಅಭಿಮಾನಿಗಳು ಸ್ವಯಂ ಪ್ರೇರಣೆಯಿಂದ ಪ್ರಚಾರದಲ್ಲಿ ಭಾಗವಹಿಸಿ ಚಂದ್ರಪ್ಪ ಗೆಲುವಿಗೆ ಪರೋಕ್ಷವಾಗಿ ಸಹಕಾರ ನೀಡಿದ್ದಾರೆ. ಜನರ ಆಯ್ಕೆ ಕಾಂಗ್ರೆಸಾಗಿದ್ದು, ಮತ್ತೊಮ್ಮೆ ಈ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ವಿಜಯದತ್ತ ಹೆಜ್ಜೆ ಇಟ್ಟಿದೆ. ಸುಳ್ಳು ಹೇಳಿ ಜನರ ದಿಕ್ಕು ತಪ್ಪಿಸುವ ಬಿಜೆಪಿಗೆ ಜನರೇ ಬುದ್ದಿ ಕಲಿಸುವರು ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಬಹಿರಂಗ ಕಡೆದಿನವಾದ ಬುಧವಾರ ನಗರದ 16,17,18 ಮತ್ತು 19ನೇ ವಾರ್ಡ್‌ಗಳಲ್ಲಿ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಪರ ಪ್ರಚಾರ ನಡೆಸಿ ಮಾತನಾಡಿದರು. ಈ ಬಾರಿಯ ಚುನಾವಣೆಯಲ್ಲಿ ಮಹಿಳೆ ಮತ್ತು ಯುವ ಮತದಾರರು ಕಾಂಗ್ರೆಸ್ ಪಕ್ಷಕ್ಕೆ ಮತ ಚಲಾವಣೆ ಮಾಡಲಿದ್ದಾರೆ. ಸರ್ಕಾರ ಐದು ಗ್ಯಾರಂಟಿಗಳು ಜನಮನ ಗೆದ್ದಿವೆ. ಕಾಂಗ್ರೆಸ್ ಪಕ್ಷ ಮತ್ತೊಮ್ಮೆ ಗೆಲುವು ಸಾಧಿಸಿ ಚಿತ್ರದುರ್ಗ ಲೋಕಸಭಾ ಕ್ಷೇತ್ರ ಕಾಂಗ್ರೆಸ್ ಭದ್ರಕೋಟೆ ಎಂದು ಸಾಬೀತು ಪಡಿಸಲು ಮುಂದಾಗಿದೆ ಎಂದರು.

ಗ್ಯಾರಂಟಿ ಯೋಜನೆಗಳ ತಾಲ್ಲೂಕು ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ಕಾಂಗ್ರೆಸ್ ಮುಖಂಡರಾದ ಟಿ.ಪ್ರಭುದೇವ್, ಎಚ್.ಎಸ್.ಸೈಯದ್, ಟಿ.ಗಿರಿಯಪ್ಪ, ಟಿ.ಮಾರಣ್ಣ, ನೇತಾಜಿಪ್ರಸನ್ನ, ಅನ್ವರ್‌ಮಾಸ್ಟರ್, ಅತಿಕೂರ್‌ರೆಹಮಾನ್, ಪ್ರಕಾಶ್‌ಮೂರ್ತಿ, ಎಂ.ಜೆ.ರಾಘವೇಂದ್ರ, ಎಚ್.ಪ್ರಶಾಂತ್‌ಕುಮಾರ್, ಕೆ.ವೀರಭದ್ರಪ್ಪ, ರಮೇಶ್‌ಗೌಡ, ಸುಮಕ್ಕ, ಮಲ್ಲಿಕಾರ್ಜುನ್, ಜಮರ್‌ವುನ್ನೀಸ, ಉಷಾ, ಬಿ.ಎಂ.ಭಾಗ್ಯಮ್ಮ, ಲಕ್ಷ್ಮೀದೇವಿ, ಹುಲಿಕುಂಟೆತಿಪ್ಪಕ್ಕ, ಸೌಭಾಗ್ಯಮ್ಮತಿಪ್ಪೇಸ್ವಾಮಿ, ಆರ್.ಪ್ರಸನ್ನಕುಮಾರ್ ಮುಂತಾದವರು ಉಪಸ್ಥಿತರಿದ್ದರು.

# ರಾಜ್ಯಕ್ಕೆ ಆದ ಅನ್ಯಾಯದ ಬಗ್ಗೆ ಬಾಯಿ ಬಿಡದ ಸಂಸದರನ್ನು ಈ ಬಾರಿ ಸೋಲಿಸಿ: ಸಿ.ಎಂ.ಕರೆ

» ಕಲ್ಬುರ್ಗಿ (ಅಪ್ಜಲ್ ಪುರ)



ಈ ಬಾರಿ ಕಲ್ಬುರ್ಗಿ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ರಾಧಾಕೃಷ್ಣ ಅವರು ಗೆಲ್ಲುವುದು ನೂರಕ್ಕೆ ನೂರು ಖಚಿತ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟವಾಗಿ ನುಡಿದರು.

ಕಾಂಗ್ರೆಸ್ ಪಕ್ಷದ ಲೋಕಸಭಾ ಅಭ್ಯರ್ಥಿ ರಾಧಾಕೃಷ್ಣ ಅವರ ಪರವಾಗಿ ಬೃಹತ್ ಜನಸಮಾವೇಶವನ್ನುಉದ್ಘಾಟಿಸಿ, ಪಕ್ಷಕ್ಕೆ ಸೇರ್ಪಡೆಗೊಂಡ ಬಿಜೆಪಿ ಮುಖಂಡರುಗಳನ್ನು ಸ್ವಾಗತಿಸಿದ ಬಳಿಕ ಮಾತನಾಡಿದರು.

ಕಲ್ಬುರ್ಗಿ ಲೋಕಸಭಾ ಕ್ಷೇತ್ರದಲ್ಲಿ ಕಳೆದ ಬಾರಿ ಮಲ್ಲಿಕಾರ್ಜುನ ಖರ್ಗಡಯವರು ಸೋತಿದ್ದರಿಂದ ಖರ್ಗೆಯವರಿಗೆ ಹೆಚ್ಚು ನಷ್ಟ ಆಗಲಿಲ್ಲ. ಇವರ ಸೋಲಿನಿಂದ ರಾಜ್ಯಕ್ಕೆ ಮತ್ತು ಜಿಲ್ಲೆಗೆ ಬಹಳ ದೊಡ್ಡ ನಷ್ಟವಾಗಿದೆ. ಈ ಬಾರಿ ಮತ್ತೆ ತಪ್ಪಾಗಬಾರದು. ಅಭಿವೃದ್ಧಿ ಪರವಾಗಿರುವ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಿ ಎಂದು ಕರೆ ನೀಡಿದರು.

371ಜೆ ಜಾರಿ ಆಗೋದಕ್ಕೆ ಮಲ್ಲಿಕಾರ್ಜುನ ಖರ್ಗೆ ಪ್ರಮುಖ ಕಾರಣ. ಇವರ ಹೋರಾಟ, ಶ್ರಮದಿಂದಾಗಿ ಈ ಭಾಗಕ್ಕೆ 371ಜೆ ಜಾರಿಯಾಗಿ ಲಕ್ಷಾಂತರ ಕುಟುಂಬಗಳಿಗೆ ದೊಡ್ಡ ಮಟ್ಟದ ವರದನವಾಗಿದೆ ಎಂದರು.

ಪುಟ 2

## ಪ್ರಮುಖ ಸುದ್ದಿ

# ಏಪ್ರಿಲ್ 26ರಂದು ಮತದಾನ: ತಪ್ಪದೇ ಮತ ಚಲಾಯಿಸಿ

» ಚಿತ್ರದುರ್ಗ

ಇದೇ ಏಪ್ರಿಲ್ 26ರಂದು ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಮತದಾನ ಜರುಗಲಿದೆ. ಚುನಾವಣಾ ಆಯೋಗ ಮತದಾನಕ್ಕೆ ಸಕಲ ಸಿದ್ಧತೆ ಮಾಡಿಕೊಂಡಿದೆ. ಪ್ರಜಾಪ್ರಭುತ್ವದ ಹಬ್ಬ ಎನಿಸಿದ ಮತದಾನದ ದಿನದಂದು ಎಲ್ಲಾ ಅರ್ಹ ಮತದಾರರು ತಪ್ಪದೇ ಮತಗಟ್ಟೆಗಳಿಗೆ ತೆರಳಿ ಮತ ಚಲಾಯಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮನವಿ ಮಾಡಿದ್ದಾರೆ.

ಮತಗಟ್ಟೆಗಳ ಸಿಂಗಾರ: ಮತ ಚಲಾಯಿಸಲುಆಗಮಿಸುವಮತದಾರರನ್ನು ಆಕರ್ಷಿಸಲು ಹಾಗೂ ಅಗತ್ಯ ಮೂಲಭೂತ ಸೌಲಭ್ಯಗಳನ್ನುಮತಗಟ್ಟೆಗಳಲ್ಲಿಚುನಾವಣಾ ಆಯೋಗದಿಂದ ಕೈಗೊಳ್ಳಲಾಗಿದೆ. ಜಿಲ್ಲೆಯ 6 ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಮತದಾರರನ್ನು ಆಕರ್ಷಿಸಲು 54 ವಿಶೇಷ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಮಹಿಳಾ ಮತದಾರರನ್ನು ಉತ್ತೇಜಿಸಲು ಮಹಿಳಾ ಮತದಾರರು ಹೆಚ್ಚಿರುವ ಕಡೆ 5 ಸಖಿ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಈ ಮತಗಟ್ಟೆಗಳಲ್ಲಿ ಮಹಿಳಾ ಅಧಿಕಾರಿಗಳೇ ಕಾರ್ಯ ನಿರ್ವಹಿಸಲಿದ್ದಾರೆ. ಇದೇ ಮಾದರಿಯಲ್ಲಿ 6 ವಿಧಾನಸಭಾ ಕ್ಷೇತ್ರಗಳಲ್ಲಿ ವಿಶೇಷ ಚೇತನ, ಯುವ, ವಿಷಯಾಧಾರಿತ ಹಾಗೂ ಸ್ಥಳೀಯ ಇತಿಹಾಸ, ಪರಂಪರೆ, ಸಂಸ್ಕೃತಿ ಬಿಂಬಿಸುವ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಮತದಾರರು ಬಿಸಿಲಿನ ತಾಪದಿಂದ ಮುಕ್ತವಾಗಿಸಲು ಮತಗಟ್ಟೆಗಳಲ್ಲಿ ತೆಂಗಿನ ಗರಿಯ ಚಪ್ಪರ, ಶಾಮಿಯಾನ ಹಾಕಿ ನೆರಳಿನ ವ್ಯವಸ್ಥೆ ಕಲ್ಪಿಸಲಾಗಿದೆ.

ಮತದಾನದ ಪ್ರಕ್ರಿಯೆಗಳು: ಪ್ರತಿ ಮತಗಟ್ಟೆಗಳಲ್ಲಿ ಓರ್ವ ಮತಗಟ್ಟೆ ಅಧಿಕಾರಿ ಇಬ್ಬರು ಸಹಾಯಕ ಮತಗಟ್ಟೆ ಅಧಿಕಾರಿ ಹಾಗೂ ಓರ್ವ ಮತದಾನ ಅಧಿಕಾರಿ ಕಾರ್ಯನಿರ್ವಹಿಸಲಿದ್ದಾರೆ. ಮತ ಚಲಾಯಿಸಲು ಆಗಮಿಸುವ ಮತದಾರರು ಸರತಿ ಸಾಲಿನಲ್ಲಿ ನಿಂತು ತಮ್ಮ ಮತ ಚಲಾಯಿಸಬಹುದು. ಚಿತ್ರದುರ್ಗ ಲೋಕಸಭಾ ಕ್ಷೇತ್ರವ್ಯಾಪ್ತಿಯಲ್ಲಿ 18,56,876 ಮತದಾರರಿದ್ದು, ಈಗಾಗಲೇ 17,47,963 ಮತದಾರರಿಗೆ ಕ್ಯೂಆರ್ ಕೋಡ್ ಉಳ್ಳ ವೋಟರ್ ಸ್ಲಿಪ್ ಹಂಚಿಕೆ ಮಾಡಲಾಗಿದೆ.

ಮತದಾರರು ಮತದಾನ ಕೇಂದ್ರಕ್ಕೆ ಮತದಾನ ಮಾಡಲು ಆಗಮಿಸಿದಾಗ ಮತಗಟ್ಟೆಕೇಂದ್ರದಲ್ಲಿಮೂರುಜನಮತಗಟ್ಟೆ ಅಧಿಕಾರಿಗಳಿದ್ದು, ಮತಗಟ್ಟೆ ಅಧಿಕಾರಿ 1 ಅವರ ಬಳಿ ಮತದಾರರ ಪಟ್ಟಿಯಲ್ಲಿ ನಿಮ್ಮ ಹೆಸರು ಮತ್ತು ಮತದಾರರ ಗುರುತಿನ ಚೀಟಿಯನ್ನು ಪರಿಶೀಲಿಸಲಾಗುತ್ತದೆ. ನಂತರದಲ್ಲಿನ ಅಧಿಕಾರಿಗಳು ಕ್ರಮವಾಗಿ ಮತದಾರನ ಎಡಗೈ ತೋರು ಬೆರಳಿಗೆ ಅಳಿಸಲಾಗದ ಶಾಹಿಯ ಗುರುತನ್ನು ಹಾಕಿ, ಮತದಾನದ ಚೀಟಿ ನೀಡಿ ಸಹಿ ಪಡೆದುಕೊಳ್ಳಲಾಗುತ್ತದೆ.



ಮತದಾರನು ಗುರುತಿನ ಚೀಟಿ ಪಡೆದು ಅಧಿಕಾರಿಯ ಬಳಿ ಬೆರಳಿಗೆ ಹಾಕಿದ ಶಾಹಿಯನ್ನು ಪರಿಶೀಲಿಸಿಕೊಂಡು ಮತಯಂತ್ರದ ಬಳಿ ತೆರಳಿ ನಿಮ್ಮ ಆಯ್ಕೆಯ ಅಭ್ಯರ್ಥಿಯ ಹೆಸರು, ಚಿಹ್ನೆ ಪರಿಶೀಲಿಸಿಕೊಂಡು, ನಿಮ್ಮ ಆಯ್ಕೆಯ ಅಭ್ಯರ್ಥಿಯ ಕ್ರಮಸಂಖ್ಯೆ ಬಟನ್ ಒತ್ತುವ ಮೂಲಕ ಮತ ಚಲಾಯಿಸಬಹುದು. ಒಂದು ವೇಳೆ ಅಭ್ಯರ್ಥಿಗಳು ಯಾರು ಇಷ್ಟವಾಗದಿದ್ದಲ್ಲಿ ನೋಟಾ ಬಟನ್ ಬಳಸಿ ಮತಚಲಾಯಿಸಬದು. ಮತ ಚಲಾಯಿಸಿದ ನಂತರ ಬೀಪ್ ಸೌಂಡ್ ಕೇಳಿ ಬರುವುದನ್ನು ಖಚಿತ ಪಡಿಸಿಕೊಂಡ ನಂತರ ಮತಖಾತ್ರಿ ಯಂತ್ರದಲ್ಲಿ ಮತ ಚಲಾಯಿಸಿದ ಅಭ್ಯರ್ಥಿಯ ಕ್ರಮಸಂಖ್ಯೆ, ಚಿಹ್ನೆ, ಗುರುತನ್ನು ಪರಿಶೀಲಿಸುವ ಮೂಲಕ ಮತದಾನ ಸರಿಯಾಗಿದೆ ಎಂಬುದನ್ನು ಖಚಿತಪಡಿಸಿಕೊಳ್ಳಬುದು.

ಮತ ಚಲಾಯಿಸಲು ಬಳಸಬಹುದಾದ ದಾಖಲೆಗಳು: ಮತದಾನ ಮಾಡಲು ಮತದಾರನು ಎಪಿಕ್ ಕಾರ್ಡ್ ಇಲ್ಲವೆಂದು ಚಿಂತಿಸಬೇಕಿಲ್ಲಾ. ಪ್ರಜಾಪ್ರಭುತ್ವದ ಹಬ್ಬದಲ್ಲಿ ಯಾವೊಬ್ಬ ಮತದಾರನು ಮತದಾನದಿಂದ ವಂಚಿತರಾಗಬಾರದು ಎಂಬ ದೃಷ್ಠಿಯಿಂದ ಚುನಾವಣಾ ಆಯೋಗವು ಎಪಿಕ್ ಕಾರ್ಡ್ ಹೊರತುಪಡಿಸಿ 12 ಅನುಮೋದಿತ ದಾಖಲೆಗಳನ್ನು ಗುರುತಿನ ಚೀಟಿಯಾಗಿ ಬಳಸಿ ಮತದಾನ ಮಾಡಲು ಅವಕಾಶ ಕಲ್ಪಿಸಿಕೊಟ್ಟಿದೆ.ಮತದಾರನುಎಪಿಕ್‌ಇಲ್ಲದೇ ಹೋದಲ್ಲಿ ಅದರ ಬದಲಾಗಿ ಆಧಾರ್, ನರೇಗಾ ಜಾಬ್ ಕಾರ್ಡ್, ಬ್ಯಾಂಕ್/ಅಂಚೆ ಕಛೇರಿಯ ಭಾವಚಿತ್ರವುಳ್ಳ ಪಾಸ್‌ಬುಕ್, ಕಾರ್ಮಿಕ ಸಚಿವಾಲಯದಿಂದ ನೀಡಿರುವ ಆರೋಗ್ಯ ವಿಮಾ ಕಾರ್ಡ್, ಚಾಲನಾ ಪರವಾನಗಿ, ವಿಶೇಷ ಚೇತನರ ಗುರುತಿನ ಚೀಟಿ, ಪಾನ್ ಕಾರ್ಡ್, ಎನ್.ಪಿ.ಆರ್ ಅಡಿಯಲ್ಲಿ ಆರ್.ಜಿ.ಐ ನ ಸ್ಮಾರ್ಟ್ ಕಾರ್ಡ್, ಭಾರತೀಯ ಪಾಸ್‌ಪೋರ್ಟ್, ಭಾವಚಿತ್ರ ಇರುವ ಪಿಂಚಣಿ ದಾಖಲೆ, ಸೇವಾ ಗುರುತಿನ ಚೀಟಿ ಹಾಗೂ ಎಂಪಿ, ಎಂಎಲ್‌ಎ ಗಳಿಗೆ ನೀಡಿರುವ ಅಧಿಕೃತ ಗುರುತಿನ ಚೀಟಿಗಳನ್ನು ಬಳಸಿ ಮತದಾನ ಚಲಾಯಿಸಬಹುದು ಎಂದು ಚುನಾವಣಾ ಆಯೋಗವು ಸ್ಪಷ್ಟಪಡಿಸಿದೆ.

ಮತಗಟ್ಟೆಗಳಲ್ಲಿ ಪಾಲಿಸಬೇಕಾದದ್ದು: ಚುನಾಣಾ ಅಂಗವಾಗಿ ಪ್ರತಿಯೊಬ್ಬ ಮತದಾರನು ಭಾರತದ ಚುನಾವಣಾ ಆಯೋಗದ ವೆಬ್‌ಸೈಟ್‌ನಲ್ಲಿ ಅಥವಾ ವೋಟರ್ ಹೆಲ್ಪ್‌ಲೈನ್‌ನಲ್ಲಿ ಲಭ್ಯವಿರುವ ಮತದಾರರ ಪಟ್ಟಿಯಲ್ಲಿ ನಿಮ್ಮ ಹೆಸರು, ಮತಗಟ್ಟೆಯ ಸಂಖ್ಯೆ ಇರುವುದನ್ನು ಮೊದಲು ಖಚಿತ ಪಡಿಸಿಕೊಳ್ಳಬೇಕು. ಮತದಾರನು ಭಾವಚಿತ್ರವಿರುವ ಗುರುತಿನ ಚೀಟಿ ಅಥವಾ ಚುನಾವಣಾ ಆಯೋಗವು ಸೂಚಿಸಿರುವ ಇತರೆ 12 ದಾಖಲೆಗಳಲ್ಲಿ ಯಾವುದಾದರೊಂದು ಗುರುತಿನ ಚೀಟಿಯನ್ನುಸಿದ್ಧವಾಗಿಟ್ಟುಕೊಂಡಿರಬೇಕು. ಮತದಾನ ಮಾಡಲು ಬಂದಾಗ ಅನುಚಿತವಾಗಿ ವರ್ತಿಸದೇ ಸರದಿ ಸಾಲಿನಲ್ಲಿ ನಿಂತು ಸೌಮ್ಯಯುತವಾಗಿ ಮತದಾನ ಮಾಡಬೇಕು. ಮತಗಟ್ಟೆ ಕೇಂದ್ರಗಳಿಗೆ ಯಾವೊಬ್ಬ ಮತದಾರನು ಕೂಡ ಮೊಬೈಲ್, ಡಿಜಿಟಲ್, ಪೆನ್ ಕ್ಯಾಮೆರಾ, ಆಯುಧ, ಶಸ್ತ್ರಾಸ್ತ್ರ, ನೀರಿನ ಬಾಟಲ್ ಅಥವಾ ಯಾವುದೇ ರೀತಿಯ ದ್ರಾವಣ, ಆಹಾರ ಸಾಮಾಗ್ರಿಗಳು, ಸ್ಫೋಟಕಗಳು, ಮತ್ತಿತರ ವಸ್ತುಗಳನ್ನು ಮತಗಟ್ಟೆ ಕೇಂದ್ರಕ್ಕೆ ತರುವುದನ್ನು ಕಡ್ಡಾಯವಾಗಿ ನಿರ್ಬಂಧಿಸಿದೆ.



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5830 |
| 85 ಕೆಡಿಎಂ (ಗ್ರಾಂ) | 5330 |



| ಬೆಳ್ಳಿ ಬೆಲೆ | |
|---|---|
| ಕೆಜಿ | 67500 |



## ಫಾಸ್ಟ್ ನ್ಯೂಸ್

### ಏಪ್ರಿಲ್ 26 ಮತದಾನದ ದಿನದಂದು ಸಾರ್ವತ್ರಿಕ ರಜಾದಿನ ಘೋಷಣೆ

» **ಚಿತ್ರದುರ್ಗ**

ಎರೆಡನೇ ಹಂತದ ಲೊಕಸಭೆ ಸಾರ್ವತ್ರಿಕ ಚುನಾವಣೆಗೆ ಏಪ್ರಿಲ್ 26 ರಂದು ಚಿತ್ರದುರ್ಗ ಜಿಲ್ಲೆಯಲ್ಲಿ ಮತದಾನ ಜರುಗಲಿದೆ. ಮತದಾನದ ದಿನವನ್ನು ಸಾರ್ವತ್ರಿಕ ರಜಾದಿನವನ್ನಾಗಿ ಘೋಷಣೆ ಮಾಡಲಾಗಿದೆ. ಅಂದು ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಕಂಪನಿಗಳು ಸಹ ಉದ್ಯೋಗಿಗಳಿಗೆ ರಜೆ ನೀಡಲಿವೆ. ಅಗತ್ಯ ಸೇವೆ ಹಾಗೂ ಮತದಾನ ಪ್ರಕ್ರಿಯಲ್ಲಿ ಕರ್ತವ್ಯ ನಿತರಾಗಿರುವ ಸಿಬ್ಬಂದಿ ಹೊರತು ಪಡಿಸಿ ಎಲ್ಲಾ ಅರ್ಹ ಮತದಾರರು ಏಪ್ರಿಲ್ 26 ರಂದು ಮತಗಟ್ಟೆಗಳಿಗೆ ತೆರಳಿ ತಪ್ಪದೇ ಮತದಾನ ಮಾಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಕೋರಿದ್ದಾರೆ.

### 14.32 ಕೋಟಿ ವಿವಿಧ ವಸ್ತು ವಶ

» **ದಾವಣಗೆರೆ**

ಲೋಕಸಭಾ ಚುನಾವಣೆ ನಡೆಯುತ್ತಿದ್ದು ನೀತಿ ಸಂಹಿತೆಯು ಮಾರ್ಚ್ 16 ರಿಂದಲೇ ಜಾರಿಯಲ್ಲಿದ್ದು ಏಪ್ರಿಲ್ 24 ರ ವರೆಗೆ ನೀತಿ ಸಂಹಿತೆ ಉಲ್ಲಂಘನೆಯಡಿ ರೂ.14,32,07,731 ಮೌಲ್ಯದ ವಿವಿಧ ವಸ್ತುಗಳು, ಮದ್ಯ, ಮಾದಕ ವಸ್ತು ಸೇರಿದಂತೆ ನಗದು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಚುನಾವಣಾಧಿಕಾರಿ ಡಾ: ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ. ಚುನಾವಣಾ ದಿನಾಂಕ ಪ್ರಕಟವಾದ ದಿನದಿಂದ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದ್ದು ಜಿಲ್ಲೆಯಾದ್ಯಂತ 32 ಚೆಕ್ ಪೋಸ್ಟ್, 21 ಫ್ಲೈಯಿಂಗ್ ಸ್ಕ್ವಾಡ್, ವೀಡಿಯೋ ಸರ್ವಲೆನ್ಸ್ ತಂಡ, ಅಬಕಾರಿ ಜಾಗೃತ ದಳ, ವಾಣಿಜ್ಯ ತೆರಿಗೆ ಇಲಾಖೆ ತಂಡ ಸೇರಿದಂತೆ ಪೊಲೀಸ್ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇದರಲ್ಲಿ ಎಫ್‌ಎಸ್‌ಟಿಯಿಂದ ರೂ.75,62,100 ನಗದು ವಶ, ಎಸ್‌ಎಸ್‌ಟಿಯಿಂದ ರೂ.95,35,536 ನಗದು ವಶ, ಎಫ್. ಎಸ್.ಟಿ.ಯಿಂದ 400 ಟವರ್ ಫ್ಯಾನ್, 56.36 ಗ್ರಾಂ ಚಿನ್ನ, 579 ಸೀರೆಗಳನ್ನು ವಶಪಡಿಸಿಕೊಂಡಿದ್ದು ಇದರ ಮೌಲ್ಯ ರೂ.8,26,530 ಗಳಾಗಿರುತ್ತದೆ. ಚೆಕ್‌ಪೋಸ್ಟ್‌ಗಳಲ್ಲಿ 17 ಮೊಬೈಲ್, 300 ಜೀನ್ಸ್ ಪ್ಯಾಂಟ್, ರೂ.12,52,02,115 ಮೌಲ್ಯದ 20.874 ಕೆ.ಜಿ. ಬಂಗಾರ ಸೇರಿ ರೂ.12,60,98,095 ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಇದಲ್ಲದೇ ಅಬಕಾರಿ ಇಲಾಖೆಯಿಂದ ರೂ.573013 ಮೌಲ್ಯದ 1570.41 ಲೀ ಮದ್ಯ ವಶಪಡಿಸಿಕೊಂಡಿದೆ. ಪೊಲೀಸ್ ಇಲಾಖೆಯಿಂದ ರೂ.210703.45 ಮೌಲ್ಯದ 542.494 ಲೀ ಮದ್ಯ ಹಾಗೂ ರೂ.12000 ಮೌಲ್ಯದ 158 ಗ್ರಾಂ ಗಾಂಜಾವಶ ಪಡಿಸಿಕೊಂಡಿದೆ. ಇಲ್ಲಿಯವರೆಗೆ ವೆಚ್ಚಕ್ಕೆ ಸಂಬಂಧಿಸಿದ 3 ಎಫ್‌ಐಆರ್ ಹಾಗೂ 2 ಎಫ್‌ಎಸ್‌ಟಿಯಿಂದ ಹಾಗೂ ಅಬಕಾರಿ ಕಾಯಿದೆಯಡಿ 728 ಪ್ರಕರಣ ದಾಖಲಿಸಲಾಗಿದೆ.

### ಅಂಚೆ ಮತದಾನ ಸೇವಾಕೇಂದ್ರ: ಮತ ಚಲಾಯಿಸಲು ಏ.25 ಕಡೆಯ ದಿನ

» **ಚಿತ್ರದುರ್ಗ**

ಬೇರೆ ಲೋಕಸಭಾ ಕ್ಷೇತ್ರದ ಮತದಾರರಾಗಿದ್ದು, ಚಿತ್ರದುರ್ಗ ಲೋಕಸಭಾ ಕ್ಷೇತ್ರ ಚುನಾವಣೆ ಕಾರ್ಯದಲ್ಲಿ ನಿರತವಾಗಿ ರುವ ನೌಕರರು, ಮತಚಲಾಯಿಸಲು ಅನುಕೂಲವಾಗುವಂತೆ ಎಲ್ಲಾ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಅಂಚೆ ಮತದಾನ ಸೇವಾಕೇಂದ್ರ ತೆರೆಯಲಾಗಿದೆ. ಫಾರಂ 12 ನೀಡಿದ ಎಲ್ಲಾ ಅರ್ಹ ಮತದಾರರು ಏಪ್ರಿಲ್ 25 ರವರೆಗೆ ಈ ಕೇಂದ್ರಗಳಲ್ಲಿ ಮತಚಲಾಯಿಸಲು ಅವಕಾಶವಿದೆ. ಇದರ ಸದುಯೋಗ ಪಡೆದುಕೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರಾಜ್ಯಕ್ಕೆ ಆದ ಅನ್ಯಾಯದ ಬಗ್ಗೆ ಬಾಯಿ ಬಿಡದ ಸಂಸದರನ್ನು ಈ ಬಾರಿ ಸೋಲಿಸಿ: ಸಿ.ಎಂ.ಕರೆ

» **ಮೊದಲ ಪುಟದಿಂದ**

ಬಿಜೆಪಿಯವರು 371ಜೆ ಕೊಡಲು ಖಡಾಖಂಡಿತವಾಗಿ ನಿರಾಕರಿಸಿದ್ದರು. ಆದರೆ ಖರ್ಗೆಯವರ ಕಾರಣದಿಂದ ಸಂವಿಧಾನಕ್ಕೆ ತಿದ್ದುಪಡಿ ತರಲಾಯಿತು. ಇದರ ಫಲವಾಗಿ 371ಜೆ ಈ ಭಾಗಕ್ಕೆ ದೊಡ್ಡ ಮಟ್ಟದ ಅನುಕೂಲ ಆಗಿದೆ ಎಂದರು. ಮಲ್ಲಿಕಾರ್ಜುನ ಖರ್ಗೆಯವರ ಸೋಲಿನಿಂದ ಈ ಭಾಗಕ್ಕೆ ಬಹಳ ನಷ್ಟ ಆಗಿದೆ. ಈ ಬಾರಿ ಅದಕ್ಕೆ ಅವಕಾಶ ಕೊಡಬಾರದು ಎಂದರು.

ಏಏಖಆಃ ಮೂಲಕ ಕಲ್ಯಾಣ ಕರ್ನಾಟಕ ಜಿಲ್ಲೆಗಳ ಅಭಿವೃದ್ಧಿಗೆ ರಾಜ್ಯ ಸರ್ಕಾರ 5000 ಕೋಟಿ ನೀಡಲಾಗಿದೆ. ಎಲ್ಲಾ ಜಾತಿ, ಎಲ್ಲಾ ಧರ್ಮದವರ ಅಭಿವೃದ್ಧಿ ಮತ್ತು ಏಳಿಗೆಗಾಗಿ ನಮ್ಮ ಸರ್ಕಾರ ಕಾರ್ಯಕ್ರಮಗಳನ್ನು ರೂಪಿಸಿ ನುಡಿದಂತೆ ನಡೆದು, ಐದು ಗ್ಯಾರಂಟಿಗಳನ್ನು ಜಾರಿ ಮಾಡಿದ್ದೇವೆ. ಮೋದಿಯವರು ಹತ್ತತ್ತು ವರ್ಷ ಪ್ರಧಾನಿಯಾಗಿ ಬಡ ಭಾರತೀಯರ, ಮಧ್ಯಮ ವರ್ಗದ ಭಾರತೀಯರ ಪ್ರಗತಿಗಾಗಿ, ಏಳಿಗೆಗಾಗಿ ಒಂದೇ ಒಂದು ಕಾರ್ಯಕ್ರಮವನ್ನು ಜಾರಿ ಮಾಡಿದ ಉದಾಹರಣೆ ಇದ್ದರೆ ತೋರಿಸಿ ಎಂದು ಸವಾಲು ಹಾಕಿದರು.

---

### ಭೂಮಿ ದಿನಾಚರಣೆ ಮತ್ತು ಯುವಜನರಲ್ಲಿ ಮತ ಜಾಗೃತಿ

# ಪ್ಲಾಸ್ಟಿಕ್ ಮುಕ್ತ ಮಾಡಲು ಸಂಕಲ್ಪ ಮಾಡೋಣ

» **ಚಿತ್ರದುರ್ಗ**



ಗಿಡ ನೆಡುವುದು, ಪ್ಲಾಸ್ಟಿಕ್ ತ್ಯಜಿಸುವುದು, ತ್ಯಾಜ್ಯವನ್ನು ಮರುಬಳಕೆ, ಭೂ ಸಂರಕ್ಷಣೆಗೆ ಜಾಗೃತಿ ಮೂಡಿಸುವುದು. ಪರಿಸರ ಮಾಲಿನ್ಯ ತಡೆ, ಪ್ರಾಣಿ ಪಕ್ಷಿಗಳ ರಕ್ಷಣೆ, ಮರಕಡಿತ ತಡೆ ಇಂತಹ ಕಾರ್ಯಗಳನ್ನು ಮಾಡುವ ಮೂಲಕ ಭೂಮಿಯನ್ನ ಕಾಪಾಡಲು ಪ್ರತಿಯೊಬ್ಬರೂ ವೈಯಕ್ತಿಕ ಜವಾಬ್ದಾರಿಗಳನ್ನು ಅನುಸರಿಸಬೇಕು ಮತ್ತು ಪ್ಲಾಸ್ಟಿಕ್ ಮುಕ್ತವಾಗಿ ಮಾಡಲು ಸಂಕಲ್ಪ ಮಾಡೋಣ ಎಂದು ನಗರಸಭೆ ಆಯುಕ್ತರಾದ ಎಂ. ರೇಣುಕಾ ಹೇಳಿದರು.

ಋಷಿಸಂಸ್ಕೃತಿ ಗುರುಕುಲ ಮಹಾಸಂಸ್ಥಾನ, ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ, ಕರ್ನಾಟಕ ರಾಜ್ಯ ಶಿಕ್ಷಣ ಪರಿಷತ್ತು ವತಿಯಿಂದ ಚಿತ್ರದುರ್ಗ ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ವಿಶ್ವ ಭೂಮಿ ದಿನಾಚರಣೆ ಮತ್ತು ಭೂಮಿಸಂರಕ್ಷಣೆಯಲ್ಲಿ ವಿದ್ಯಾರ್ಥಿಗಳ ಪಾತ್ರ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ನಗರಸಭೆ ಇಂತಹ ಕಾರ್ಯಕ್ರಮಗಳಿಗೆ ಸದಾ ಸಹಕಾರ ನೀಡುತ್ತದೆ. ಪ್ಲಾಸ್ಟಿಕ್ ನಿಷೇದ ಮತ್ತು ಜಲ ಸಂರಕ್ಷಣೆ, ಗಿಡಬೆಳೆಸುವುದು, ಭೂಮಿ ರಕ್ಷಣೆ ಬಗ್ಗೆ ಪ್ರಬಂಧ ಸ್ಪರ್ಧೆ ಮಾಡಲಾಗುವುದು. ಅದರಲ್ಲೂ ಮಹಿಳೆಯರು ಇರುವ ಈ ಕಾಲೇಜಿನಲ್ಲಿ ಅದು ಪರಿಣಾಮಕಾರಿಯಾಗಿರಲಿ ಎಂದರು.

ಭೂಮಿಯ ಸುರಕ್ಷತೆಯಲ್ಲಿ ಪರಿಸರವು ಪ್ರಮುಖ ಪಾತ್ರ ವಹಿಸುತ್ತದೆ. ಜಲ, ವಾಯು ಮಾಲಿನ್ಯ, ಅರಣ್ಯನಾಶ ಹಾಗೂ ಇನ್ನೂ ಹಲವು ಪ್ರಮುಖ ಸಮಸ್ಯೆಗಳ ಬಗ್ಗೆ ಜನರು ಒಟ್ಟಾಗಿ ಮಾತನಾಡಬೇಕು, ಅಲ್ಲದೆ ಈ ಬಗ್ಗೆ ಜನರಲ್ಲಿ ಸ್ವಯಂ ಜಾಗೃತಿ ಮೂಡಬೇಕು ಎಂಬುದು ಈ ದಿನದ ಮಹತ್ವವಾಗಿದೆ. ನಗರದಲ್ಲಿ ಮರ ಕಡಿಯುವವರ ಮೇಲೆ ಎಫ್ ಐ ಆರ್ ದಾಖಲಿಸಲಾಗುತ್ತದೆ ಎಂದರು.

ಚುನಾವಣಾ ಹಿನ್ನೆಲೆಯಲ್ಲಿ ಯುವ ಮತದಾರರು ಕಡ್ಡಾಯವಾಗಿ ಮತ ಹಾಕಿ ಮತ್ತು ಮತದಾನದಿಂದ ದೂರ ಉಳಿಯುವುದನ್ನು ತಪ್ಪಿಸಿ ಗ್ರಾಮೀಣ ಮತ್ತು ನಗರದಲ್ಲಿ ಮತ ಪ್ರಮಾಣ ಹೆಚ್ಚಬೇಕು ಎಂದು ಆಯುಕ್ತರು ಉದಾಹರಣೆ ಸಮೇತ ಮಾಹಿತಿಯನ್ನು ಹಂಚಿಕೊಂಡರು.

ಕರ್ನಾಟಕ ರಾಜ್ಯ ಶಿಕ್ಷಣ ಪರಿಷತ್ತು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗೀತಾ ಭರಮಸಾಗರ ಅವರು ಭೂಮಿ ಸಂರಕ್ಷಣೆಯಲ್ಲಿ ವಿದ್ಯಾರ್ಥಿಗಳ ಪಾತ್ರ ಕುರಿತು ಉಪನ್ಯಾಸ ನೀಡುತ್ತಾ, ಜೀವಿಗಳು ವಾಸಿಸಲು ಯೋಗ್ಯವಾದ ಒಂದೇ ಒಂದು ಸ್ಥಳ ಭೂಮಿ. ಹಾಗಾಗಿ ಭೂಮಿಗೆ ತಾಯಿ ಸ್ಥಾನ ನೀಡಲಾಗಿದೆ. ಆದರೆ, ಈಗ ಆ ಮಾತಿನ ಅರ್ಥ ಕಳೆದು ಕೆಣಟಿಜಜಜಿಟಿಜಜಳ್ಳುತ್ತಿದೆ. ನೀರು, ವಾಯು ಮಾಲಿನ್ಯವಾಗುತ್ತಿವೆ. ಪ್ರಾಣಿಗಳು ಅಳಿವಿನಂಚಿಗೆ ತಲುಪಿವೆ. ಇದೆಲ್ಲ ಆಗಿದ್ದು ಮನುಷ್ಯ ತನ್ನ ಶ್ರೀಮಂತಿಕೆಯ ದಾಹದಿಂದ. ಭೂಮಿ ಎಚ್ಚರಿಕೆಕೊಡುತ್ತಿದೆ. ವಿದ್ಯಾರ್ಥಿಗಳು ಪರಿಸರ ಉಳಿಸುವ ಕಾಯಕ ಮಾಡೋಣ ಎಂದರು.

ಪ್ರಾಸ್ತಾವಿಕ ಮಾತನಾಡಿದ ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ ರಾಜ್ಯ ಪ್ರಧಾನ ಕಾರ್ಯದರ್ಶಿ ಮಾಲತೇಶ್ ಅರಸ್, ಪರಿಸರವನ್ನು ರಕ್ಷಿಸುವ ತೀವ್ರ ಅಗತ್ಯತೆ ನಮ್ಮಮೇಲಿದೆ. ಮಿತಿಮೀರಿದ ಜನಸಂಖ್ಯೆ, ಜೀವವೈವಿಧ್ಯತೆಯ ನಷ್ಟ, ಓಝೋನ್ ಪದರದ ಸವಕಳಿ ಮತ್ತು ಹೆಚ್ಚುತ್ತಿರುವ ಮಾಲಿನ್ಯ, ಜಾಗತಿಕ ತಾಪಮಾನ ಏರಿಕೆ, ಇವೇ ಮುಂತಾದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಮತ್ತು ಸಮಕಾಲೀನ ಹಾಗೂ ಹೊಸ ಪೀಳಿಗೆಯಲ್ಲಿ ಜಾಗೃತಿ ಮೂಡಿಸುವ ಉದ್ದೇಶವನ್ನು ಈ ದಿನ ಒಳಗೊಂಡಿದೆ ಎಲ್ಲರೂ ಮಾತೃಭೂಮಿಯ ಮಕ್ಕಳಾಗಿ ಪರಿಸರ ವೃದ್ದಿಸೋಣ. ಋಷಿಸಂಸ್ಕೃತಿ ಗುರುಕುಲ ಮಹಾಸಂಸ್ಥಾನದಿಂದ ರಾಜ್ಯಾದ್ಯಂತ ಗ್ರೀನ್ ಕರ್ನಾಟಕ ಟೀಮ್ ರಚನೆ ಮಾಡಿದ್ದು ಹಸಿರು ಸಮೃದ್ಧವಾಗಲು ಎಲ್ಲರೂ ಕೈ ಜೋಡಿಸಿ ಎಂದರು.

ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಕನ್ನಡ ವಿಭಾಗದ ಮುಖ್ಯಸ್ಥ ಡಾ. ಮಂಜುನಾಥ್ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಗ್ರೀನ್ ಕರ್ನಾಟಕ ಟೀಮ್ ಕಮಿಷನರ್ ಡಾ.ಎಂ.ಸಿ.ನರಹರಿ, ವಾಣಿಜ್ಯ ವಿಭಾಗದ ಮುಖ್ಯಸ್ಥ ಡಾ. ಚನ್ನಕೇಶವ, ಡಾ.ಮಧು, ಶಿವಣ್ಣ, ಕುಮಾರಸ್ವಾಮಿ, ಶಕುಂತಲಾ ಮತ್ತು ವಿವಿಧ ವಿಭಾಗದ ಉಪನ್ಯಾಸಕರು, ವಿದ್ಯಾರ್ಥಿಗಳು ಇದ್ದರು.

---

# ನಿಡುಗಲ್ಲು ಮಠಕ್ಕೆ ಕಾಂಗ್ರೆಸ್ ಅಭ್ಯರ್ಥಿ ಭೇಟಿ

» **ಚಿತ್ರದುರ್ಗ**



ರಾಜ್ಯದಲ್ಲಿಯೇ ಪ್ರಭಾವಿ, ಪ್ರಸಿದ್ಧಿ ಪಡೆದಿರುವ ವಾಲ್ಮೀಕಿ ಸಮುದಾಯದ ಮಠವು, ಚಿತ್ರದುರ್ಗ ಲೋಕಸಭಾಕ್ಷೇತ್ರದಕಾಂಗ್ರೆಸ್‌ಅಭ್ಯರ್ಥಿ ಬಿ.ಎನ್.ಚಂದ್ರಪ್ಪಅವರನ್ನುಗೆಲ್ಲಿಸಬೇಕುಎಂದುಕರೆ ನೀಡಿದೆ.

ಕ್ಷೇತ್ರ ವ್ಯಾಪ್ತಿಯ ಪಾವಗಡತಾಲೂಕಿನಲ್ಲಿನ ನಿಡುಗಲ್ಲು ಮಹಾಸಂಸ್ಥಾನಕ್ಕೆ ನೂರಾರು ವಾಲ್ಮೀಕಿ ಸಮುದಾಯದ ಮುಖಂಡರಜೊತೆ ಬಿ.ಎನ್. ಚಂದ್ರಪ್ಪ ಬುಧವಾರ ಭೇಟಿ ನೀಡಿದ್ದ ಸಂದರ್ಭ ಮಠದಜಗದ್ಗುರು ಶ್ರೀ ವಾಲ್ಮೀಕಿ ಸಂಜಯಕುಮಾರ ಸ್ವಾಮೀಜಿ ಆಶೀರ್ವದಿಸಿ ಮಾತನಾಡಿದರು.

ನಾವು ಸರಳ, ಸಜ್ಜನಿಕೆ, ಜನರಜೊತೆ ನಿರಂತರಒಡನಾಟ ಹೊಂದಿರುವವರು, ಧಾರ್ಮಿಕಕ್ಷೇತ್ರವನ್ನುಗೌರವಿಸುವಂತಹವರುರಾಜಕೀಯಕ್ಷೇತ್ರದಲ್ಲಿಇರಬೇಕೆಂದುಅಪೇಕ್ಷೆ ಪಡುತ್ತೇವೆ. ಅದರಲ್ಲೂಚಂದ್ರಪ್ಪಅವರಂತಹ ಸಜ್ಜನರ ಗೆಲುವು ಅಗತ್ಯವಾಗಿದೆಎಂದರು.

ವಾಲ್ಮೀಕಿ ಸಮುದಾಯದ ಹಿರಿಯ ನಾಯಕ, ಸಚಿವಎನ್. ರಾಜಣ್ಣ ಹಾಗೂ ನೂರಾರು ಮುಖಂಡರುಚಂದ್ರಪ್ಪಅವರನ್ನುಗೆಲ್ಲಿಸಲು ಶ್ರಮಿಸುತ್ತಿರುವ ವಿಷಯ ನಮ್ಮ ಗಮನಕ್ಕೆ ಇದೆ.ನಾವು ಕೂಡ ನೀವು ಗೆಲ್ಲಬೇಕೆಂದು ಆಶೀರ್ವದಿಸುತ್ತೇವೆ. ಕ್ಷೇತ್ರದ ಪ್ರಜ್ಞಾವಂತ ಮತದಾರರು ಹೃದಯವಂತ, ಸಜ್ಜನಿಕೆರಾಜಕಾರಣಿಚಂದ್ರಪ್ಪಅವರನ್ನುತಮ್ಮ ಮನೆಯ ಮಗನೆಂದು ಭಾವಿಸಿ ಅವರನ್ನುಗೆಲ್ಲಿಸಬೇಕೆಂದುಕರೆ ನೀಡಿದರು.

ನಾಡಿಮ ಮಠ, ಮಾನ್ಯಗಳು ಹಾಗೂ ಜನರಕುರಿತು ಹೆಚ್ಚುಗೌರವ ಭಾವನೆ ಹೊಂದಿರುವ ವಿನಯವಂತಿಕೆಯಚಂದ್ರಪ್ಪ ಪ್ರಜಾಪ್ರಭುತ್ವರಕ್ಷಣೆಗೆ ಬದ್ಧರಾಗಿದ್ದಾರೆ.ಆದ್ದರಿಂದಅವರಗೆಲ್ಲಬೇಕು.ಈ ನಿಟ್ಟಿನಲ್ಲಿ ಮತದಾರರುಅವರನ್ನು ಆಶೀರ್ವದಿಸಬೇಕೆಂದುಕೋರುತ್ತೇವೆಎಂದರು.

ವಾಲ್ಮೀಕಿ ಸಮುದಾಯದ ಮುಖಂಡರಾದ ರಾಮಾಂಜನೇಯ, ರಾಜೇಶ್, ರವಿ, ಚಂದ್ರುಇತರರು ಇದ್ದರು.

---

## ಬಿಜೆಪಿ, ಜೆಡಿಎಸ್ ಪಕ್ಷಗಳಿಂದ ಕುರುಬ ಸಮುದಾಯಕ್ಕೆ ಅನ್ಯಾಯ

» **ಹೊಸದುರ್ಗ**

ಕರ್ನಾಟಕ ರಾಜ್ಯದ ಜನಸಂಖ್ಯೆಯಲ್ಲಿ 3ನೇ ಸ್ಥಾನದಲ್ಲಿರುವ ಕುರುಬ ಸಮಾಜ 65 – 70 ಲಕ್ಷ ಜನಸಂಖ್ಯೆಯನ್ನು ಹೊಂದಿದೆ. ಸಾಮಾಜಿಕ



ನ್ಯಾಯದಂತೆ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಸಮುದಾಯದವರಿಗೆ ಲೋಕಸಭಾ ಕ್ಷೇತ್ರದ ಚುನಾವಣೆಯಲ್ಲಿ 2 ಟಿಕೆಟ್ ನೀಡಬೇಕಿತ್ತು. ಆದರೆ, ಈ ಪಕ್ಷಗಳಿಂದ ಒಬ್ಬರಿಗೂ ಟಿಕೆಟ್ ನೀಡಿಲ್ಲ. ಕುರುಬ ಸಮುದಾಯದವರು ಒಂದು ಮತವನ್ನು ನಿಮಗೆ ಹಾಕುವುದಿಲ್ಲವೇ? ಟಿಕೆಟ್ ಹಂಚಿಕೆಯಲ್ಲಿ ಸಮುದಾಯಕ್ಕೆ ಅನ್ಯಾಯವೆಸಗಿರುವ ರಾಜ್ಯದ ಸಮಸ್ತ ಕುರುಬ ಸಮುದಾಯದ ಮತದಾರರು ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳಿಗೆ ಬುದ್ಧಿ ಕಲಿಸಬೇಕಿದೆ ಎಂದು ರಾಜ್ಯ ಕುರುಬರ ಸಂಘದ ನಿರ್ದೇಶಕ ಡಾ.ಎಂ.ಎಚ್. ಕೃಷ್ಣಮೂರ್ತಿ ಹೇಳಿದರು.

ಪಟ್ಟಣದಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಸೈಕಲ್ ತುಳಿದು ಬಿಜೆಪಿ ಪಕ್ಷ ಕಟ್ಟಿ ಬೆಳೆಸುವಲ್ಲಿ ನಮ್ಮ ಕುರುಬ ಸಮುದಾಯದ ಹಿರಿಯ ನಾಯಕ ಕೆ.ಎಸ್. ಈಶ್ವರಪ್ಪನವರ ಶ್ರಮ ಬಹಳಷ್ಟಿದೆ. ಇಂತಹ ದೊಡ್ಡ ನಾಯಕನಿಗೆ ಷಡ್ಯಂತರ ಮಾಡಿ ರಾಜಕೀಯವಾಗಿ ಮೂಲೆಗುಂಪು ಮಾಡಲಾಗುತ್ತಿದೆ. ಅವರ ಪಕ್ಷ ಸೇವೆಯನ್ನು ಗುರುತಿಸಿ, ಅವರ ಮಗನಿಗೆ ಟಿಕೆಟ್ ನೀಡಬೇಕಿತ್ತು. ಇದನ್ನು ವಿರೋಧಿಸಿದ್ದಕ್ಕೆ ಪಕ್ಷದಿಂದಲೇ ಉಚ್ಚಾಟನೆ ಮಾಡಲಾಗಿದೆ. ಶಿವಮೊಗ್ಗ ಜಿಲ್ಲೆಯಲ್ಲಿ ಕುರುಬರು ಬಿಜೆಪಿಯಲ್ಲಿ ಯಾರು ಇಲ್ಲವೆಂದೇ? ಇವರನ್ನೇಕೆ ಇಟ್ಟುಕೊಳ್ಳಬೇಕೆನ್ನುವ ದೃಷ್ಟಿಯಿಂದ ಅವರನ್ನು ಉಚ್ಚಾಟನೆ ಮಾಡಲಾಗಿದೆಯೇ ಎಂದು ಬಿಜೆಪಿ ಪಕ್ಷದ ನಾಯಕರನ್ನು ಪ್ರಶ್ನಿಸಿದರು.

ಕಾಂಗ್ರೆಸ್ ಪಕ್ಷ ಸಾಮಾಜಿಕ ನ್ಯಾಯದ ಅಡಿಯಲ್ಲಿ ಕುರುಬ ಸಮುದಾಯಕ್ಕೆ ಧಾರವಾಡ ಮತ್ತು ಕೊಪ್ಪಳ ಲೋಕಸಭಾ ಕ್ಷೇತ್ರಗಳಲ್ಲಿ ಟಿಕೆಟ್ ನೀಡಿದೆ. ಕುರುಬ ಸಮುದಾಯದ ಜೊತೆಗೆ ಇನ್ನಿತರ ಎಲ್ಲಾ ಸಮುದಾಯಗಳನ್ನು ಒಟ್ಟೊಟ್ಟಿಗೆ ತೆಗೆದುಕೊಂಡು ಹೋಗುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಕೈ ಬಲಪಡಿಸಬೇಕು. ಇದೀಗ, ನಡೆಯಲಿರುವ ಲೋಕಸಭಾ ಮಹಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಅತ್ಯಧಿಕ ಮತಗಳನ್ನು ಹಾಕುವ ಮೂಲಕ ಹೆಚ್ಚು ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸೋಣ. ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲೂ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಗೆಲ್ಲುವ ವಿಶ್ವಾಸವಿದ್ದು, ಚುನಾವಣೆಯಲ್ಲಿ ಕಾಂಗ್ರೆಸ್ಗೆ ಅತ್ಯಧಿಕ ಮತಗಳನ್ನು ಹಾಕುವ ಮೂಲಕ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳಿಗೆ ಕುರುಬ ಸಮಾಜದ ಶಕ್ತಿ ತೋರಿಸಬೇಕೆಂದು ಸಮುದಾಯದ ಜನರಲ್ಲಿ ಮನವಿ ಮಾಡಿದರು.

ಈ ವೇಳೆ ಚಿತ್ರದುರ್ಗ ಜಿಲ್ಲಾ ಕುರುಬರ ಸಂಘದ ನಿರ್ದೇಶಕ ಸುರೇಶ್ ಸೇರಿದಂತೆ ಸಮುದಾಯದ ಇತರ ಮುಖಂಡರಿದ್ದರು.

---

## ವಿದ್ಯಾರ್ಥಿಗಳಿಗೆ ಜ್ಞಾನಾರ್ಜನೆಗೆ ಬೇಸಿಗೆ ಶಿಬಿರ ಸಹಕಾರಿ : ನಟರಾಜ್

» **ಚಳ್ಳಕೆರೆ**

ತಾಲ್ಲೂಕಿನ ತಳಕು ಹೋಬಳಿಯ ಹೊಸಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಅಗಸ್ತ್ಯ ಫೌಂಡೇಷನ್, ಟಾಟಾ ಪವರ್‌ಲ್ಯಾಬ್ ಅನ್ ಎ ಬೈಕ್ ಸಹಯೋಗದೊಂದಿಗೆ ಬೇಸಿಗೆ ಶಿಬಿರವನ್ನು ಹಮ್ಮಿಕೊಂಡಿದ್ದು, ಮಕ್ಕಳಿಗೆ ಹಲವಾರು ರಾಷ್ಟ್ರೀಯ ನಾಯಕರ ಬಗ್ಗೆ ಮಾಹಿತಿ ನೀಡಿ, ಚಿತ್ರಕಲೆ, ಮಾದರಿ ತಯಾರಿಕೆ, ಆಟ ಸಾಮಾಗ್ರಿಗಳು, ಒರಿಗಾಮಿ, ಕಿರಿಗಾಮಿ ಮುಂತಾದವುಗಳ ಬಗ್ಗೆ ಶಿಬಿರದಲ್ಲಿ ತರಬೇತಿ ನೀಡಲಾಯಿತು.




ತರಬೇತಿ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಮುಖ್ಯೋಪಾಧ್ಯಾಯ ಎಂ.ಎಸ್.ನಟರಾಜ್, ನಮ್ಮ ಶಾಲೆಯಲ್ಲಿ ಸುಮಾರು 15 ದಿನಗಳ ಕಾಲ ಬೇಸಿಗೆ ಶಿಬಿರವನ್ನು ಅಗಸ್ತ್ಯ ಫೌಂಡೇಷನ್ ಸಹಯೋಗದೊಂದಿಗೆ ನಡೆಸಲಾಯಿತುಹೆಚ್ಚಿನಮಕ್ಕಳುಭಾಗವಹಿಸಿದ್ದರು. ಶಿಬಿರದಲ್ಲಿ ಹಲವಾರು ವಿಚಾರಗಳ ಬಗ್ಗೆ ಮಾರ್ಗದರ್ಶನ ನೀಡಿ ಶಿಬಿರಾರ್ಥಿಗಳಿಗೆ ಪ್ರಶಸ್ತಿ ಪತ್ರವನ್ನು ವಿತರಿಸಿದರು.

ಅಗಸ್ತ್ಯ ಫೌಂಡೇಷನ್ ಶಿಕ್ಷಕ ಹಾಗೂ ಶಿಬಿರದ ಮಾರ್ಗದರ್ಶಿ ಬಸವೇಶ್ವರ, ಶಿಕ್ಷಕರಾದ ಕೆ.ಎಸ್.ಶ್ರೀಕಾಂತ್, ಆರ್.ವಿ.ಚಿಟ್ಟಿಬಾಬು, ನುಸ್ರರತ್‌ಉನ್ನೀಸ, ಗಾಯಿತ್ರಿದೇವಿ, ಬಿ.ಸಿ.ಮಂಜುಳಾ ಉಪಸ್ಥಿತರಿದ್ದರು.

---

**ಪ್ರಮುಖ ಸುದ್ದಿ**

### ಪರಶುರಾಂಪುರದ ಮುಖ್ಯ ವೃತ್ತ, ಜಂಕ್ಷನ್, ರಸ್ತೆಗಳು ಸಿಸಿ ಕ್ಯಾಮರಾ ಕಣ್ಗಾವಲಲ್ಲಿವೆ.

# ನಿಲ್ಲುವ ವಾಹನಗಳಿಗೆ ಹ್ಯಾಂಡಲ್ ಲಾಕ್ ಮಾಡಿ ಜಾಗೃತಿ

» **ಮಹದೇವಪುರ ಶಿವಮೂರ್ತಿ.**







ಪರಶುರಾಂಪುರ–ಬಸ್ ಸ್ಟಾಂಡ್‌ಗೆ ಬಂದ್ರೆ ಸಾಕು ಬೈಕ್ ಸೈಡಿಗೆ ನಿಲ್ಲಿಸಿ ಹ್ಯಾಂಡಲ್ ಲಾಕ್ ಮಾಡಿಕೊಂಡು ಹೋಗಿ ವಾಹನ ಕಳ್ಳತನವಾಗಬಹುದು ಎನ್ನುವ ಸಂದೇಶ ಜತೆ ಸಂಚಾರ ನಿಯಮಗಳ ಬಗ್ಗೆ ಪ್ರತಿ ದಿನ ಬೆಳಿಗ್ಗೆಯಿಂದ ರಾತ್ರಿಯ ವರಗೆ ಮುದ್ರಿತ ಸಂದೇಶ ಧ್ವನಿವರ್ಧಕದಲ್ಲಿ ಪ್ರಸಾರವಾಗುತ್ತಿದೆ.

ಹೌದು ಇದು ಪರಶುರಾಂಪುರ ಗ್ರಾಮದ ಮುಖ್ಯ ವೃತ್ತದಲ್ಲಿ ಪೊಲೀಸ್ ಇಲಾಖೆಯ ಪ್ರಕಟಣೆಯ ಧ್ವನಿ ಎಂದು ಕೇಳಬಹುದು.ಸ್ಥಳೀಯ ಪೊಲೀಸ್ ಠಾಣೆಯ ಪಿಎಸ್‌ಐ ಪ್ರಶಾಂತ್ ಕುಮಾರ್ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಇತ್ತೀಚೆಗೆ ಬೈಕ್ ಕಳ್ಳತನ ಪ್ರಕರಣ ಕಂಡು ಬಂದ ಹಿನ್ನೆಲೆಯಲ್ಲಿ ಕಳ್ಳತನ ಹಾಗೂ ಅಹಿತಕರ ಘಟನೆ ತಡೆಗೆ ಅರಿವು ಮೂಡಿಸುವ ಹಿನ್ನಲೆಯಲ್ಲಿ ಈ ಕೆಲಸವಾಗುತ್ತದೆ.

**ಜನದಟ್ಟಣೆಯ ಕಡೆಗಳಲ್ಲಿವೆ 11 ಹೊಸ ಸಿಸಿ ಕ್ಯಾಮೆರಾ.:** ಈ ಮೊದಲಿದ್ದ ಕ್ಯಾಮೆರಾ ಬದಲಾಗಿ ಗ್ರಾಮದ ಪ್ರಮುಖ ಜನದಟ್ಟಣೆ ಕಡೆಯ ಪ್ರದೇಶಗಳನ್ನ ಭಜರಂಗಿ ಸೂಪರ್ ಮಾರ್ಕೆಟ್,ಆಸ್ಪತ್ರೆ ಸೇರಿದಂತೆ ಜಂಕ್ಷನ್ ಸೇರಿದಂತೆ ಇನ್ನಿತರೆ ಸ್ಥಳಗಳನ್ನ ಗುರುತಿಸಿ ಅಲ್ಲಿ ನೂತನವಾಗಿ ಹನ್ನೊಂದು ಸಿಸಿ ಕ್ಯಾಮೆರಾಗಳನ್ನ ಅಲ್ಲಲ್ಲಿ ಅಳವಡಿಸಲಾಗಿದೆ.

**ದುರಸ್ತಿ ಕಂಡ ಸಿಸಿ ಕ್ಯಾಮೆರಾ:** ಈ ಮೊದಲು ಗ್ರಾಮದ ಮುಖ್ಯ ವೃತ್ತ.ಚೌಳೂರು ಗೇಟ್,ಕೊಲ್ಲಪುರದಮ್ಮ ದೇವಸ್ಥಾನ ಬಳಿ , ಧರ್ಮಪುರ ಮಾರ್ಗ ಸೇರಿದಂತೆ ಇನ್ನಿತರೆ ಕೆಲಾ ಆಯಾ ಕಟ್ಟಿನ ಜಾಗದಲ್ಲಿ ಇದ್ದ ಸಿಸಿ ಕ್ಯಾಮೆರಾ ಕೆಟ್ಟು ಹೋಗಿದ್ದವು,ಇವುಗಳನ್ನ ಬಂಡವಾಳ ಮಾಡಿಕೊಂಡಿದ್ದ ಕಳ್ಳರು ಬೈಕ್ ಕಳ್ಳತನದಲ್ಲಿ ತೊಡಗಿದ್ದರು,ಆ ಸಿಸಿ ಕ್ಯಾಮೆರಾಗಳನ್ನ ರಿಪೇರಿ ಗೊಳಿಸಿ ಅದಕ್ಕೆ ಐ ಕ್ವಾಲಿಡಿ ಕವರಿಂಗ್ ಲೆನ್ಸ್ ಅಳವಡಿಸಲಾಗಿದೆ.

**ಬೈಕ್ ಹ್ಯಾಂಡಲ್ ಲಾಕ್ ಇಲ್ಲವೇ ಕೀ ಬಿಟ್ಟರೆ ದಂಡ:** ಗ್ರಾಮದ ವೃತ್ತ ಸೇರಿದಂತೆ ಇನ್ನಿತರ ಕಡೆ ಪೊಲೀಸ್ ಸಿಬ್ಬಂದಿ ನಿಯೋಜನೆ ಮಾಡಲಾಗಿದೆ.ಸವಾರರು ಬೈಕ್ ಹ್ಯಾಂಡಲ್ ಲಾಕ್ ಮಾಡದೇ ಹಾಗೂ ಕೀ ಯನ್ನ ಅದರಲ್ಲೇ ಬಿಟ್ಟು ಹೋದರೆ ದಂಡ ಜತೆ ಪೊಲೀಸ್ ಠಾಣೆ ಸೇರುವ ಮೊದಲು ಎಚ್ಚರ ವಹಿಸಿ ಎಂದು ಸಿಬ್ಬಂದಿಗಳು ಸವಾರರಿಗೆ ಜಾಗೃತಿ ಜತೆ ಅರಿವು ಮೂಡಿಸುತ್ತಿದ್ದಾರೆ.

**ಅಪಘಾತ ತಡೆಗೆ ಜಾಗೃತಿ:** ಹಗಲು ಮತ್ತು ರಾತ್ರಿ ಪಾಳಯದಲ್ಲಿ ಬೈಕ್ ಸವಾರರು ಹೆಲ್ಮೆಟ್ ,ಕಾರು ಸವಾರರಿಗೆ ಸೀಟ್ ಬೆಲ್ಟ್ ಹಾಕುವಂತೆ ಜಾಗೃತಿ ಕೆಲಸವು ನಡೆಯುತ್ತಿದೆ.ಬೈಕ್ ಇನ್ಶೂರೆನ್ಸ್ ಜತೆ ಅಗತ್ಯ ದಾಖಲೆಗಳು ವಾಹನಕ್ಕೆ ಇರಲಿ ಎನ್ನುವ ಅರಿವು ನಡೆಯುತ್ತಿದೆ.ಒಟ್ಟಾರೆಯಾಗಿ ಬೈಕ್ ಕಳ್ಳರ ಪತ್ತೆಗೆ ಪೊಲೀಸ್ ಇಲಾಖೆಯ ಸನ್ನದ್ಧವಾಗಿದೆ.ಇದರ ನಡುವೆ ತಂಡವು ಕಾರ್ಯಚರಣೆಯಲ್ಲಿ ತೊಡಗಿದೆ.ಇನ್ನೂ ಸಾರ್ವಜನಿಕರಿಗೆ ಅಪರಾಧ ತಡೆ ಹಾಗೂ ಸಂಚಾರ ನಿಯಮಗಳ ಜಾಗೃತಿಯು ನಡೆಯುತ್ತಿದೆ.

## ಫಾಸ್ಟ್ ನ್ಯೂಸ್

### ಎಸ್ಆರ್ಎಸ್ ಹೆರಿಟೇಜ್ ಶಾಲೆಯ ಪ್ರಾಂಶುಪಾಲ ವಿಜಯ್‌ಗೆ ಅತ್ಯುತ್ತಮ ಶಿಕ್ಷಣಕಾರ ಪ್ರಶಸ್ತಿ

» **ಚಳ್ಳಕೆರೆ**



ಶೈಕ್ಷಣಿಕಕ್ಷೇತ್ರದಲ್ಲಿಚಳ್ಳಕೆರೆತಾಲ್ಲೂಕುರಾಜ್ಯಮಟ್ಟದಲ್ಲಿ ಖ್ಯಾತಿಯಾದ ಕಾಲವಿತ್ತು, ಆದರೆ, ಈಗ ಗುಣಮಟ್ಟದ ಶಿಕ್ಷಣದಿಂದ ವಿದೇಶದ ಶಿಕ್ಷಣ ಸಂಸ್ಥೆಗಳು ಸಹ ಈ ಭಾಗದ ಶಿಕ್ಷಕರು ಹಾಗೂ ಅವರ ಸೇವೆಯ ಗುರುತಿಸಿ ಗೌರವಿಸುವ ಮೂಲಕ ಚಳ್ಳಕೆರೆ ಶಿಕ್ಷಣದ ಖ್ಯಾತಿ ಅಂತರಾಷ್ಟ್ರೀಯ ಮಟ್ಟದತ್ತ ಸಾಗಿದೆ. ನಗರದ ಎಸ್ಆರ್ಎಸ್ ಹೆರಿಟೇಜ್ ಶಾಲೆಯ ಪ್ರಾಂಶುಪಾಲರಾಗಿ ಕಳೆದ ಹಲವಾರು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಬಿ.ಎಸ್.ವಿಜಯ್‌ರವರಿಗೆ 2023-24ನೇ ಶೈಕ್ಷಣಿಕ ಸಾಲಿನ ಏಷ್ಯದ ಅತ್ತುತ್ತಮ ಶಿಕ್ಷಣಕಾರ ಎಂದು ಗುರುತಿಸಿ ಪ್ರಶಸ್ತಿ ನೀಡಿ ಗೌರವಿಸಿದೆ. ವಿದೇಶದಲ್ಲಿರುವ ಹಮ್ಮಿಂಗ್ ಬರ್ಡ್ ಎಜುಕೇಷನ್ ಲಿಮಿಟೆಡ್ ಶೈಕ್ಷಣಿಕ ಸಂಸ್ಥೆ ಇತ್ತೀಚೆಗೆ ರಾಷ್ಟ್ರೀಯ ಮಟ್ಟದಲ್ಲಿ ನಡೆಸಿದ ಸರ್ವೆಕ್ಷಣ ಕಾರ್ಯದಲ್ಲಿ ಎಸ್ಆರ್ಎಸ್ ಹೆರಿಟೇಜ್ ಕಾಲೇಜು ಪ್ರಾಂಶುಪಾಲ ಬಿ.ಎಸ್.ವಿಜಯ್ ಈ ಪ್ರಶಸ್ತಿಗೆ ಪಾತ್ರರಾಗಿದ್ದಾರೆ. ಶಿಕ್ಷಣ ಗುಣಮಟ್ಟದ ಜೊತೆಗೆ ಅಂತರಾಷ್ಟ್ರೀಯ ಮಟ್ಟದ ಒಲಂಪಿಯಾಡ್ ಪರೀಕ್ಷೆಗಳಲ್ಲಿ ಉತ್ತಮ ಫಲಿತಾಂಶ ನೀಡಿದ ಹಿನ್ನೆಲೆಯಲ್ಲಿ ಅವರಿಗೆ ಈ ಗೌರವವನ್ನು ನೀಡಲಾಗಿದೆ. ಪ್ರಶಸ್ತಿಗೆ ಪಾತ್ರರಾದ ಪ್ರಾಂಶುಪಾಲ ಬಿ.ಎಸ್.ವಿಜಯ್ ಸಾಧನೆಗೆ ಶಿಕ್ಷಣ ಸಂಸ್ಥೆಯ ಅದ್ಯಕ್ಷ ಬಿ.ಎ.ಲಿಂಗಾರೆಡ್ಡಿ, ಕಾರ್ಯದರ್ಶಿ ಸುಜಾತಲಿಂಗಾರೆಡ್ಡಿ, ಆಡಳಿತಾಧಿಕಾರಿ ಪಿ.ಎನ್. ಕೃಷ್ಣಪ್ರಸಾದ್, ಕಾಲೇಜು ಪ್ರಾಂಶುಪಾಲ ಸತ್ಯನಾರಾಯಣ ಹಾಗೂ ಉಪನ್ಯಾಸಕರು, ಶಿಕ್ಷಕರು ಇವರ ಸಾಧನೆಗೆಮೆಚ್ಚಿಗೆ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ.

### ಅನಾರೋಗ್ಯದಿಂದ ಪಿಡಿಒ ಎ.ಕೆ.ಯೋಗೇಶಪ್ಪ ನಿಧನ

» **ಚಳ್ಳಕೆರೆ**



ಕಳೆದ ಕೆಲವು ದಿನಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಎ.ಕೆ. ಯೋಗೇಶಪ್ಪ (42) ದಾವಣಗೆರೆ ಜಿಲ್ಲೆ ಹೊನ್ನಾಳಿ ತಾಲ್ಲೂಕಿನ ಹಲಗನಹಳ್ಳಿ ಗ್ರಾಮದ ತಮ್ಮ ಮನೆಯಲ್ಲಿ ಬುಧವಾರ ಬೆಳಗ್ಗೆ ನಿಧನರಾಗಿರುತ್ತಾರೆ.ಎ.ಕೆ. ಯೋಗೇಶಪ್ಪ ತಾಲ್ಲೂಕಿನ ಗೋಪನಹಳ್ಳಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಅನಾರೋಗ್ಯ ನಿಮಿತ್ತ ರಜೆಯ ಮೇಲೆ ತಮ್ಮ ಗ್ರಾಮದಲ್ಲಿಯೇ ಚಿಕಿತ್ಸೆ ಪಡೆಯುತ್ತಿದ್ದರು. ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಬಿ.ಎಸ್.ಲಕ್ಷ್ಮಣ್, ತಾಲ್ಲೂಕಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಸಂಘ ಶೋಕ ವ್ಯಕ್ತಪಡಿಸಿವೆ.

### ಏಕನಾಥೇಶ್ವರಿಜಾತ್ರೆ



» **ಚಿತ್ರದುರ್ಗ**

ಲೋಕಸಭೆ ಚುನಾವಣೆಯ ನೀತಿ ಸಂಹಿತೆ ಹಿನ್ನೆಲೆಯಲ್ಲಿ ಒಂದು ವಾರಗಳ ಕಾಲ ಮುಂದೂಡಲಾಗಿದ್ದ ಏಕನಾಥೇಶ್ವರಿ ಅಮ್ಮನವರ ಜಾತ್ರೆ ಏ.23 ರಿಂದ ಆರಂಭಗೊಂಡಿದ್ದು, ಮೇ.7 ರಂದು ಕಂಕಣ ವಿಸರ್ಜನೆ ಮತ್ತು ಗಂಗಾಪೂಜೆಯೊಂದಿಗೆ ಮುಕ್ತಾಯಗೊಳ್ಳಲಿದೆ. 27 ರಂದು ಕಂಕಣ ಧಾರಣೆ, ಭಂಡಾರ ಪೂಜೆ, ರುದ್ರಾಭಿಷೇಕ, ರಾತ್ರಿ ಎಂಟು ಗಂಟೆಯಿಂದ ರಾಜ ಬೀದಿಗಳಲ್ಲಿ ಸಿಂಹವಾಹಿನಿ ಉತ್ಸವ. 28 ರಂದು ರಾತ್ರಿ ಎಂಟು ಗಂಟೆಯಿಂದ ಸರ್ಪೋತ್ಸವದೊಂದಿಗೆ ಭಕ್ತರ ಮನೆಗಳಲ್ಲಿ ಪೂಜೆ. 29 ರಂದು ರಾತ್ರಿ 8 ಗಂಟೆಯಿಂದ ರಾಜ ಬೀದಿಗಳಲ್ಲಿ ಮಯೂರೋತ್ಸವ, 30 ರಂದು ರಾತ್ರಿ ಏಕನಾಥೇಶ್ವರಿ ಅಮ್ಮನಿಗೆ ಭಂಡಾರ ಪೂಜೆ. ಮೇ.1 ರಂದು ಬೆಳಿಗ್ಗೆ 9 ಗಂಟೆಗೆ ಭಂಡಾರದ ಪೂಜೆ, ಏಕನಾಥೇಶ್ವರಿ ಅಮ್ಮನನ್ನು ಬೆಟ್ಟದಿಂದ ಕೆಳಗಿಳಿಸಲಾಗುವುದು. ಅರ್ಚಕರ ಮನೆಯಲ್ಲಿ ಮಕ್ಕಳಿಗೆ ಬೇವಿನ ಉಡುಗೆ ಸೇವಾ ಅಶ್ವೋತ್ಸವದಲ್ಲಿ ಕಾಮನಬಾವಿ ಹೊಂಡದಲ್ಲಿ ಗಂಗಾಪೂಜೆ. ನಂತರ ಜಿಲ್ಲಾಧಿಕಾರಿ ಬಂಗಲೆ ಹಾಗೂ ಕೆಳಗೋಟೆ ಭಕ್ತಾಧಿಗಳಿಂದ ಪೂಜೆ. 2 ರಂದು ಸಂಜೆ ಏಳಕ್ಕೆ ಕರುವಿನಕಟ್ಟೆ ಮತ್ತು ಪಾದಗಟ್ಟೆ, ವಿದ್ಯಾನಗರ, ಮೆದೇಹಳ್ಳಿ ಭಕ್ತಾಧಿಗಳಿಂದ ಪೂಜೆ. 3 ರಂದು ಬೆಳಿಗ್ಗೆ ಎಂಟು ಗಂಟೆಯಿಂದ ರಾಜ ಬೀದಿಗಳಲ್ಲಿ ಅಶ್ವೋತ್ಸವ ಮತ್ತು ಹೂವಿನ ಉತ್ಸವ, ಕರುವಿನಕಟ್ಟೆ ಮತ್ತು ಜೋಗಿಮಟ್ಟಿ ರಸ್ತೆಯ ಭಕ್ತಾಧಿಗಳಿಂದ ಮಹಾ ಮಂಗಳಾರತಿ. 4 ರಂದು ಸಂಜೆ 5-30 ಕ್ಕೆ ಜಾತ್ರಾ ಬಯಲಿನ ಪಾದಗಟ್ಟೆಯಲ್ಲಿ ಏಕನಾಥೇಶ್ವರಿ ಅಮ್ಮನವರ ಸಿಡಿ ಉತ್ಸವ. ಮಹಾಮಂಗಳಾರತಿ. 5 ರಂದು ಸಂಜೆ 6-30 ಕ್ಕೆ ಬೆಟ್ಟದ ಮೇಲೆ ಓಕಳಿ ಉತ್ಸವ.

## ಅಣ್ಣಾವ್ರಿಗೆ ಅಣ್ಣಾವ್ರೇ ಸಾಟಿ: ಬಿ.ಎನ್.ಚಂದ್ರಪ್ಪ ಬಣ್ಣನೆ

# ಡಾ.ರಾಜ್, ವಿಷ್ಣು, ಅಂಬರೀಶ್ ನಾಡಿನ ಆಸ್ತಿ

» **ಚಿತ್ರದುರ್ಗ**

ಮುಖ್ಯಮಂತ್ರಿ ಸ್ಥಾನವನ್ನು ಸುಲಭವಾಗಿ ಅಲಂಕರಿಸುವ ಬಂದಿದ್ದ ಅವಕಾಶವನ್ನು ನಿರಾಕರಿಸಿ, ಕನ್ನಡ ನಾಡು-ನುಡಿಗೆ ಬದುಕು ಮಿಸಲಿಟ್ಟ ಡಾ.ರಾಜಕುಮಾರ್ ಅವರಿಗೆ ಅವರೇ ಸಾಟಿ ಎಂದು ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಬಣ್ಣಿಸಿದರು.

ಚಿತ್ರದುರ್ಗದಲ್ಲಿ ಬುಧವಾರ ಅಭಿಮಾನಿಗಳ ಬಳಗ ಆಯೋಜಿಸಿದ್ದ ಡಾ.ರಾಜಕುಮಾರ್ ಜನ್ಮದಿನಾಚರಣೆಯಲ್ಲಿ ಭಾವಚಿತ್ರಕ್ಕೆ ಪುಷ್ಪ ಗೌರವ ಸಲ್ಲಿಸಿ ಮಾತನಾಡಿದರು.



ಅಣ್ಣಾವ್ರು ಪಾತ್ರ ನಿರ್ವಹಿಸಿದ ಬಹುತೇಕ ಚಲನಚಿತ್ರಗಳು ಸಮಾಜ ಪರಿವರ್ತನೆಗೆ ಕಾರಣವಾಗಿವೆ. ಬಂಗಾರದ ಮನುಷ್ಯ ಚಿತ್ರ ವೀಕ್ಷಿಸಿ ಸಾವಿರಾರು ಯುವಕರು ಕೃಷಿ ಕಡೆ ಮುಖ ಮಾಡಿದ್ದು, ಮದ್ಯಪಾನ ವಿರುದ್ಧ ಚಳವಳಿ ಹೀಗೆ ಅನೇಕ ಸಾಮಾಜಿಕ ಕ್ರಾಂತಿಗಳಿಗೆ ಅಣ್ಣಾವ್ರ ಚಲನಚಿತ್ರಗಳು ಕಾರಣವಾಗಿದ್ದು ಅವರಲ್ಲಿದ್ದ ಬದ್ಧತೆ, ದೂರದೃಷ್ಠಿ ಕಾರಣ ಎಂದರು.

ತಮ್ಮ ಪ್ರತಿ ಪಾತ್ರ, ಪ್ರತಿ ಚಲನಚಿತ್ರ ಜನರ ಬದುಕನ್ನು ಉತ್ತಮಪಡಿಸಬೇಕು, ಮಾನವತ್ವ ವಿಜೃಂಭಿಸಬೇಕು, ನಾಡಿನಲ್ಲಿ ಸೌಹಾರ್ದತೆ ನೆಲೆಯೂರಬೇಕೆಂದು ಅಪೇಕ್ಷೆ ಪಟ್ಟು ಅದರಂತೆ ಬದುಕಿದ ಬಹುದೊಡ್ಡ ನಟ ರಾಜಕುಮಾರ್ ಅವರು ಎಂದು ಹೇಳಿದರು.

ಕನ್ನಡ ನಾಡು, ನುಡಿಗೆ ಸಣ್ಣ ಧಕ್ಕೆ ಎದುರಾದರೂ ಚಳವಳಿಗೆ ಧುಮುಕುತ್ತಿದ್ದ ಅವರಿಗೆ ಡಾ.ವಿಷ್ಣುವರ್ಧನ್, ಅಂಬರೀಶ್ ಸೇರಿ ಇಡೀ ಚಲಚಿತ್ರವೇ ಬೆಂಬಲವಾಗಿ ನಿಲ್ಲುತ್ತಿತ್ತು. ಗೋಕಾಕ್, ಕಾವೇರಿ ಚಳವಳಿ ಈಗಲೂ ಅವಿಸ್ಮರಣೀಯವಾಗಿ ಉಳಿದಿವೆ ಎಂದರು.

ಒಬ್ಬ ನಟ ತನ್ನ ಬದುಕನ್ನು ಕಟ್ಟಿಕೊಳ್ಳುವ ಜೊತೆ ಜೊತೆಗೆ ಸಮಾಜಕ್ಕೆ ಉತ್ತಮ ಸಂದೇಶ ನೀಡಬಹುದು ಎಂಬುದಕ್ಕೆ ನಾಡಿನಲ್ಲಿ ರಾಜಣ್ಣ ದಿಗ್ಗಜರಾಗಿ ನಮ್ಮನ್ನು ಎದುರುಗೊಳ್ಳುತ್ತಾರೆ ಎಂದು ಹೇಳಿದರು.

ಹಿಂದಿ, ತಮಿಳು ಸೇರಿದಂತೆ ವಿವಿಧ ಭಾಷೆಗಳಿಂದ ಬಹುದೊಡ್ಡ ಅವಕಾಶಗಳು ಹುಡುಕಿಕೊಂಡು ಬಂದರೂ ನಯವಾಗಿ ತಿರಸ್ಕರಿಸಿ ಕನ್ನಾಡಂಭೆಗಾಗಿ ನಟನೆ ಮೀಸಲಿಟ್ಟ ಅಣ್ಣಾವ್ರ ಬದುಕು ವಿಸ್ಮಯ ಎಂದರು.

ಜನರು ಮತ್ತು ಜನಪ್ರತಿನಿಧಿಗಳು ಈ ಮೂವರು ಇಂತಹ ಅಪರೂಪ ನಟರ ಬದುಕನ್ನು ಅಧ್ಯಯನ ಮಾಡುವ ಜೊತೆಗೆ ಅವರಗುಣಗಳನ್ನುಅಳವಡಿಸಿಕೊಳ್ಳಬೇಕಿದೆ. ಡಾ.ರಾಜಕುಮಾರ್ ಅವರಿಂದ ಸರಳತೆ, ಸಜ್ಜನಿಕೆ, ಭಾಷಾಭಿಮಾನ, ವಿಷ್ಣುವರ್ಧನ್ ಅವರಿಂದ ಸ್ನೇಹ, ಪ್ರೀತಿ, ಆಧ್ಯಾತ್ಮಿಕ ಚಿಂತನೆ, ಅಂಬರೀಶ್ ಅವರಿಂದ ಕ್ಷಣಿಕ ಬದುಕಿನಲ್ಲಿ ನೆಮ್ಮದಿಯಾಗಿ ಜೀವಿಸುವುದು, ಹಿಡಿದ ಕೆಲಸವನ್ನು ಜೋರು ಮಾತುಗಳಿಂದ ಮಾಡಿಸಿಕೊಳ್ಳುವುದು. ಹೀಗೆ ಇವರುಗಳು ಸಮಾಜಕ್ಕೆ ನಿಜ ಆಸ್ತಿಯಾಗಿದ್ದಾರೆ ಎಂದರು. ಅದರಲ್ಲೂ ಡಾ.ರಾಜಕುಮಾರ್ ಅವರ ಧೈರ್ಯ, ಆತ್ಮವಿಶ್ವಾಸ, ಕ್ರೂರಿ ವ್ಯಕ್ತಿಯ ಮನ ಗೆಲ್ಲುವ ರೀತಿ ಅಚ್ಚರಿ. ಅದಕ್ಕೆ ಉತ್ತಮ ಉದಾಹರಣೆ ಅಪಹರಿಸಿದ ವೀರಪ್ಪನ್, ಕೊನೆಗೆ ಅಣ್ಣಾವ್ರಿಗೆ ಶಾಲು ಹೊದಿಸಿ ಕಾಲಿಗೆ ಬಿದ್ದು ಕ್ಷಮೆ ಕೋರಿ ಬಿಡುಗಡೆಗೊಳಿಸಿದ ರೀತಿಯೇ ಸಾಕ್ಷಿ. ಇದು ಅಣ್ಣಾವ್ರ ವ್ಯಕ್ತಿತ್ವಕ್ಕೆ ಕನ್ನಡಿಯಾಗಿದೆ ಎಂದು ಹೇಳಿದರು.

ಈಗಲೂ ರಾಜಕುಮಾರ್, ವಿಷ್ಣುವರ್ಧನ್, ಅಂಬರೀಶ್ ಚಲನಚಿತ್ರಗಳು ವೀಕ್ಷಿಸಿದರೇ ನೆಮ್ಮದಿ, ಆತ್ಮವಿಶ್ವಾಸ ವೃದ್ಧಿಸುತ್ತದೆ. ಅಣ್ಣ-ತಂಗಿ, ಅಪ್ಪ-ಅಮ್ಮ, ಗಂಡ-ಹೆಂಡತಿ, ನೆರೆಹೊರೆಯವರು ಹೀಗೆ ಎಲ್ಲರೂ ಕೂಡಿ ಬಾಳುವ ಸಂದೇಶ ಅವರ ಚಲನಚಿತ್ರಗಳಲ್ಲಿ ಕಾಣಬಹುದಾಗಿತ್ತು. ಮಹಿಳಾ ದೌರ್ಜನ್ಯ, ಅಸ್ಪೃಶ್ಯತೆ, ಮೂಡನಂಬಿಕೆ ವಿರುದ್ಧ ಜಾಗೃತಿ ಮೂಡಿಸುತ್ತಿದ್ದ ಅಣ್ಣಾವ್ರ ಚಿತ್ರಗಳು ಮಾದರಿ ಅಗಿವೆ ಎಂದರು.

ಪ್ರಸ್ತುತ ಸಮಾಜದಲ್ಲಿ ಜಾತಿ, ಧರ್ಮದ ಮಧ್ಯೆ ಕಂದಕ ಸೃಷ್ಠಿಸುವ ಕಿಡಿಗೇಡಿಗಳ ಸಂಖ್ಯೆ ಹೆಚ್ಚಾಗಿರುವ ಸಂದರ್ಭ ಡಾ.ರಾಜಕುಮಾರ್, ವಿಷ್ಣುವರ್ಧನ್, ಅಂಬರೀಷ್ ಅವರು ಆಯ್ಕೆ ಮಾಡಿಕೊಂಡಂತೆ ಈಗಿನ ನಟರು ಉತ್ತಮ ಕಥೆಯುಳ್ಳ ಚಲನಚಿತ್ರಗಳಲ್ಲಿ ನಟಿಸಿ, ಉತ್ತಮ ಸಮಾಜ ನಿರ್ಮಾಣಕ್ಕೆ ಬದ್ಧತೆ ಪ್ರದರ್ಶಿಬೇಕಿದೆ ಎಂದು ತಿಳಿಸಿದರು.


ಚಿತ್ರದುರ್ಗದೊಂದಿಗೆ ಭಾವನಾತ್ಮಕ ಸಂಬಂಧ ಹೊಂದಿದ್ದ ಡಾ.ರಾಜಕುಮಾರ್, ವಿಷ್ಣುವರ್ಧನ್, ಅಂಬರೀಷ್ ಅವರ ಆದರ್ಶಗಳು ನಮಗೆ ಮಾದರಿ ಆಗಿವೆ ಎಂದರು.

ಈ ಸಂದರ್ಭದಲ್ಲಿ ಡಿಸಿಸಿ ಕಾರ್ಯಧ್ಯಕ್ಷ ಹಾಲಸ್ವಾಮಿ, ಎನ್.ಎಸ್.ಯುಐ ಘಟಕದ ಜಿಲ್ಲಾಧ್ಯಕ್ಷ ಕಿರಣ್ ಯಾವದ್, ಕಾಂಗ್ರೆಸ್ ಮುಖಂಡರಾದ ರಘು, ಸತೀಶ್, ಕೋಟಿ, ಹರೀಶ್ ಉಪಸ್ಥಿತರಿದ್ದರು.

# ದೇಶದ ಜನ ನೆಮ್ಮದಿಂದ ಬದುಕಬೇಕಾದರೆ, ಬಿಜೆಪಿ ಬೆಂಬಲಿಸಿ: ಎಸ್.ಲಿಂಗಮೂರ್ತಿ

» **ಹೊಸದುರ್ಗ**

2024 ರಲ್ಲಿ ನಡೆಯುತ್ತಿರುವುದು ಲೋಕಸಭಾ ಚುನಾವಣೆಯಲ್ಲ. ಇದೊಂದು ದೇಶಕ್ಕಾಗಿ ನಡೆಯುತ್ತಿರುವ ಮಹತ್ಕಾರ್ಯ. ದೇಶದ ಜನರು ನೆಮ್ಮದಿ ಮತ್ತು ಸುರಕ್ಷತೆಯಿಂದ ಬದುಕಬೇಕಾದರೆ, ಮತದಾರರು ಬಿಜೆಪಿಗೆ ಬೆಂಬಲಿಸಬೇಕು ಎಂದು ಲೋಕಸಭಾ ಚುನಾವಣೆ ಸಂಚಾಲಕ ಎಸ್.ಲಿಂಗಮೂರ್ತಿ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮನವಿ ಮಾಡಿದರು.



ದೇಶದಲ್ಲಿ ನರೇಂದ್ರ ಮೋದಿ ಮತ್ತೊಮ್ಮೆ ಪ್ರಧಾನಿಯಾಗಬೇಕೆಂಬ ನಿಲುವು ಮತದಾರರಲ್ಲಿ ಸ್ಪಷ್ಟವಾಗಿದೆ. ಚಿತ್ರದುರ್ಗ ಲೋಕಸಭಾ ಅಭ್ಯರ್ಥಿ ಗೋವಿಂದ್ ಎಂ.ಕಾರಜೋಳ ಅವರು ಅಪಾರ ರಾಜಕೀಯ ಅನುಭವ ಹೊಂದಿದ್ದಾರೆ. ತಾಲ್ಲೂಕಿನ ಜನತೆಗೆ ಬಿಜೆಪಿಗೆ ಬೆಂಬಲಿಸಬೇಕೆಂದು ಮನವಿ ಮಾಡಿದರು.

ಪ್ರಧಾನಿ ನರೇಂದ್ರ ಮೋದಿಯವರು ದೇಶದ ಜನರಿಗೆ ಉಚಿತ ಕೋವಿಡ್ ಲಸಿಕೆ ನೀಡುವುದು, ವಿಧಿ 370 ರದ್ದತಿ, ಅಯೋಧ್ಯೆ ರಾಮಮಂದಿರ ನಿರ್ಮಾಣ ಹೀಗೆ ಹತ್ತು ಹಲವು ಅಭಿವೃದ್ಧಿ ಕಾರ್ಯಗಳನ್ನು ಮಾಡುವುದರ ಮೂಲಕ ದೇಶ ಹಾಗೂ ವಿಶ್ವದ ಮನ್ನಣೆ ಗಳಿಸಿದ್ದಾರೆ. ಅವರು ಮತ್ತೊಮ್ಮೆ ಪ್ರಧಾನಿಯಾಗಲು ಎಲ್ಲರೂ ಸಹಕರಿಸಬೇಕೆಂದರು.

ಯಡಿಯೂರಪ್ಪ ಮುಖ್ಯಮಂತ್ರಿ ಆಗಿದ್ದ ಅವಧಿಯಲ್ಲಿ ಭದ್ರಾ ಮೇಲ್ದಂಡೆ ಯೋಜನೆ ಅನುಷ್ಠಾನಕ್ಕೆ ತರಲಾಯಿತು. ರಾಷ್ಟ್ರೀಯ ಯೋಜನೆಯನ್ನಾಗಿ ಮಾಡಿ, ₹5300 ಕೋಟಿ ಹಣ ಮಂಜೂರು ಮಾಡಲಾಗಿದೆ. ರಾಜ್ಯ ಸರ್ಕಾರದ ತಾಂತ್ರಿಕ ಸಮಿತಿ ಹಾಗೂ ಸರ್ವಪಕ್ಷ ನಿಯೋಗ ಹೋಗಿ, ಪ್ರಧಾನಿ ಗಮನಕ್ಕೆ ವಿಚಾರ ತಂದು ಹಣ ಬಿಡುಗಡೆ ಮಾಡಿಸಿಕೊಳ್ಳುವಲ್ಲಿ ವಿಫಲವಾಗಿದೆ. ಗೋವಿಂದ ಎಂ ಕಾರಜೋಳ ಅವರು ಚುನಾವಣೆಯಲ್ಲಿ ಗೆಲುವು ಸಾಧಿಸಿದ ನಂತರ ಅವರೊಂದು ಜೊತೆ ನಿಂತು ಭದ್ರಾ ಮೇಲ್ದಂಡೆ ಕಾರ್ಯ ಮುಗಿಸಿ, ತಾಲ್ಲೂಕಿನ ಜನರಿಗೆ ನೀರು ಒದಗಿಸುವ ಕಾರ್ಯ ಮಾಡುತ್ತೇನೆ ಎಂದು ಭರವಸೆ ನೀಡಿದರು.

ಕಾಂಗ್ರೆಸ್ ಸುಳ್ಳು ಭರವಸೆಗಳನ್ನು ನೀಡುತ್ತದೆ, ಅವರಿಗೆ ಉತ್ತಮ ನಾಯಕತ್ವದ ಕೊರತೆಯಿದೆ. ಸಾಮಾಜಿಕ ಹಾಗೂ ಮಹಿಳೆಯರಿಗೆ ರಕ್ಷಣೆ ನೀಡಲು ವಿಫಲವಾಗಿದೆ. ತಾಲ್ಲೂಕಿನ ಅಭಿವೃದ್ಧಿ ಕಾರ್ಯಗಳು ನಡೆದಿಲ್ಲ. ರಸ್ತೆ, ಚರಂಡಿ ನಿರ್ಮಾಣದಂತಹ ಕಾರ್ಯ ಮಾಡದೇ ಕಾಂಗ್ರೆಸ್ ಹಣವನ್ನು ದುರುಪಯೋಗ ಮಾಡಿಕೊಳ್ಳುತ್ತಿದೆ ಎಂದು ದೂರಿದರು.

ಈ ಬಾರಿ ರಾಜ್ಯದ ಎಲ್ಲಾ ಲೋಕಸಭಾ ಕ್ಷೇತ್ರಗಳಲ್ಲಿ ಬಿಜೆಪಿ ಗೆಲುವು ಸಾಧಿಸಲಿದೆ. ನರೇಂದ್ರ ಮೋದಿ ಮತ್ತೊಮ್ಮೆ ಪ್ರಧಾನಿಯಾಗುವರು. ಜಿಲ್ಲೆಯಲ್ಲಿ ಗೋವಿಂದ ಎಂ.ಕಾರಜೋಳ ಗೆಲುವು ಸಾಧಿಸುವುದು ಬಹುತೇಕ ಖಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದರು.



ನಾಳೆ ನಡೆಯಲಿರುವ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯನ್ನು ಬೆಂಬಲಿಸುವ ಕುರಿತು ರಾಘವೇಂದ್ರನಾಯ್ಕ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

## ವರನಟ ಡಾ.ರಾಜ್‌ಕುಮಾರ್ ಜಯಂತಿ: ಸರಳ ಆಚರಣೆ



» **ಚಿತ್ರದುರ್ಗ**

ಪ್ರತಿಷ್ಠಿತ ದಾದಾ ಸಾಹೇಬ್ ಫಾಲ್ಕೆ ಪ್ರಶಸ್ತಿ ಪುರಸ್ಕೃತ, ನಟಸಾರ್ವಭೌಮ ಡಾ.ರಾಜ್‌ಕುಮಾರ್ ಅವರ ಜನ್ಮ ದಿನಾಚರಣೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಚೇರಿಯಲ್ಲಿ ಬುಧವಾರ ಸರಳವಾಗಿ ಆಚರಿಸಲಾಯಿತು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಆಯೋಜಿಸಿದ್ದ ಸರಳ ಜಯಂತಿ ಕಾರ್ಯಕ್ರಮದಲ್ಲಿ ಸಹಾಯಕ ನಿರ್ದೇಶಕ ಆರ್.ಮಾರುತಿ ಅವರು ಡಾ.ರಾಜ್‌ಕುಮಾರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಗೌರವ ಸಮರ್ಪಿಸಿದರು.

ಈ ವೇಳೆ ಮಾತನಾಡಿದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ಆರ್.ಮಾರುತಿ, ಡಾ.ರಾಜ್ ಕುಮಾರ್ ಅವರು ಕರ್ನಾಟಕ ಚಿತ್ರರಂಗದಲ್ಲಿ ಧೃವತಾರೆಯಾಗಿ ಮೆರೆದ ಅದ್ಭುತ ನಟ. ಡಾ.ರಾಜ್ ಅವರು ನಟನೆ ಹಾಗೂ ಸಂಗೀತ ಈ ಎರಡು ಕ್ಷೇತ್ರದಲ್ಲೂ ಅವರು ನೀಡಿದ ಕೊಡುಗೆ ಅವಿಸ್ಮರಣೀಯ ಎಂದು ಬಣ್ಣಿಸಿದರು. ಪ್ರಸ್ತುತ 2024ರ ಲೋಕಸಭಾ ಚುನಾವಣೆ ನೀತಿ ಸಂಹಿತೆ ಜಾರಿ ಹಿನ್ನಲೆಯಲ್ಲಿ ಡಾ.ರಾಜ್ ಕುಮಾರ್ ಜಯಂತಿಯನ್ನು ಸರಳವಾಗಿ ಆಚರಿಸಲಾಯಿತು.ಈ ಸಂದರ್ಭದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಬಿ.ದಿನೇಶ ಗೌಡಗೆರೆ, ಪತ್ರಕರ್ತರಾದ ಹರಿಯಬ್ಬೆ ಸಿ ಹೆಂಜಾರಪ್ಪ, ಲಕ್ಷ್ಮಣ್, ಕುಮಾರಸ್ವಾಮಿ, ರವಿ ಮಲ್ಲಾಪುರ, ತಿಪ್ಪೇಸ್ವಾಮಿ, ಮಾರುತಿ, ಛಾಯಾಗ್ರಾಹಕ ವಿ.ಚಂದ್ರಪ್ಪ, ವಾರ್ತಾ ಮತ್ತು ಸಾರ್ವಜನಿಕ ಇಲಾಖೆಯ ಸಿಬ್ಬಂದಿಗಳಾದ ಜಿ.ವೆಂಕಟೇಶ್, ಪಿ.ಎಂ. ವೇಣುಗೋಪಾಲ, ಎಸ್.ಚಂದ್ರಶೇಖರ್, ಎಂ.ಜೆ.ಬೋರೇಶ, ಆರ್. ತಿಮ್ಮಶೆಟ್ಟಿ, ಅಂಜಿನಮೂರ್ತಿ, ಅಂಪ್ರೆಟಿಸ್ ತರಬೇತಾರ್ಥಿ ಸಿ.ಕಾಟೇಶ್, ನಿವೃತ್ತ ನೌಕರ ಹೆಚ್.ತಿಪ್ಪಯ್ಯ ಇದ್ದರು.

## ಪ್ರಮುಖ ಸುದ್ದಿ

### ತಾಯಿ ಭದ್ರೆ ಸಹಿಸುವುದಿಲ್ಲ ಸುಳ್ಳು: ಕಮಲ ಪಡೆಗೆ ಕಾಂಗ್ರೆಸ್ಅಭ್ಯಥಿ ಬಿ.ಎನ್.ಚಂದ್ರಪ್ಪ ತಿರುಗೇಟು

# ಬಿಜೆಪಿಗರಿಗೆ ಇಲ್ಲ ಭದ್ರಾ ಹೋರಾಟದ ಮಾಹಿತಿ

» **ಚಿತ್ರದುರ್ಗ**

ಭದ್ರಾ ಮೇಲ್ದಂಡೆಯೋಜನೆ ವಿಷಯದಲ್ಲಿ ನಿರಂತರ ಸುಳ್ಳು ಹೇಳಿಕೊಂಡು ಬರುತ್ತಿರುವ ಬಿಜೆಪಿಯವರಿಗೆ ಭದ್ರಾ ಮಲ್ದಂಡೆಯೋಜನೆಜಾರಿ, ಅದಕ್ಕಾಗಿ ನಡೆದ ಹೋರಾಟದ ಮಾಹಿತಿಕೊರತೆಇದೆಅಥವಾಗೊತ್ತಿದ್ದು ಹೋರಾಟಗಾರರಿಗೆಅಪಮಾನ ಮಾಡಲು ಸುಳ್ಳು ಹೇಳುತ್ತಿದ್ದಾರೆ ಎಂದುಕಾಂಗ್ರೆಸ್ಅಭ್ಯರ್ಥಿ ಬಿ.ಎನ್. ಚಂದ್ರಪ್ಪ ಹೇಳಿದರು.



ನಗರದಐಯುಡಿಪಿ ಲೇಔಟ್‌ನಲ್ಲಿ ಬುಧವಾರಹಮ್ಮಿಕೊಂಡಿದ್ದ ಪ್ರಚಾರ ಸಭೆಯಲ್ಲಿ ಮಾತನಾಡಿ, ಭದ್ರಾ ಮೇಲ್ದಂಡೆಯೋಜನೆಗಾಗಿಜಿಲ್ಲೆಯಜನ ನಾಲ್ಕೈದು ದಶಕಗಳ ಕಾಲ ಹೋರಾಟ ನಡೆಸಿದ್ದಾರೆ ಎಂದರು.

ಇದಕ್ಕೆ ಸ್ಪಷ್ಟರೂಪದೊರೆತಿದ್ದು ಸಾಹಿತಿ ಬಂಜಗೆರೆಜಯಪ್ರಕಾಶ್ ನೇತೃತ್ವದಲ್ಲಿಜಿಲ್ಲೆಯ ಪತ್ರಕರ್ತರುಅಧ್ಯಂ ಮನಕ್ಕೆಗೊಂಡು ನೀರಾವರಿ ಹೋರಾಟ ಸಮಿತಿ ಅಸ್ತಿತ್ವಕ್ಕೆ ತಂದಾಗ. ಮೊದಲ ಅಧ್ಯಕ್ಷರು ಮುತ್ಸದ್ಧಿರಾಜಕಾರಣಿಎಚ್. ಹನುಮಂತಪ್ಪ, ಬಳಿಕ ಪಿ.ಕೋದಂಡರಾವ 'ಯ್ಯಅಧ್ಯಕ್ಷರಾದ ಸಂದರ್ಭ ಚಳವಳಿ ತೀವ್ರ ಸ್ವರೂಪ ಪಡೆದುಕೊಂಡಿತು. ನಂತರದಲಿತ ನಾಯಕಎಂ.ಜಯಣ್ಣಅಧ್ಯಕ್ಷರಾಗಿ ಸಮಿತಿಯನ್ನು ಮುನ್ನಡಿಸಿದರು.ಈ ಚಳವಳಿಗೆ ಪತ್ರಕರ್ತರು, ವಿದ್ಯಾರ್ಥಿ, ರೈತ, ಕನ್ನಡಪರ, ಕಾರ್ಮಿಕ ಸೇರಿದಂತೆ ವಿವಿಧ ಸಮುದಾಯದ ಸಂಘಟನೆಗಳು ಬೀದಿಗಿಳಿದು ಹೋರಾಟ ನಡೆಸಿವೆ. ಜಿಲ್ಲೆಯಎಲ್ಲ ಪಕ್ಷಗಳು, ಜನಪ್ರತಿನಿಧಿಗಳು ಬೆಂಬಲವಾಗಿ ನಿಂತಿದ್ದರು.ಆದರೆ ಬಿಜೆಪಿಯವರು ಮಾತ್ರ ಈ ವಿಷಯವನ್ನುಎಲ್ಲಿಯೂ ಪ್ರಸ್ತಾಪಿಸದೆಜಿಲ್ಲೆಯಜನರಿಗೆಅಪಮಾನ ಮಾಡುತ್ತಿದ್ದಾರೆಎಂದರು.

2004ರಲ್ಲಿ ಎಸ್.ಎಂ.ಕೃಷ್ಣ ನೇತೃತ್ವದಕಾಂಗ್ರೆಸ್ ಸರ್ಕಾರ ಬಜೆಟ್‌ನಲ್ಲಿಯೋಜನೆಜಾರಿಕುರಿತು ಪ್ರಸ್ತಾಪ ಮಾಡಿತು.ಜತೆಗೆ ಸಾಧಕ-ಬಾಧಕಕುರಿತುಅಧ್ಯಯನ ನಡೆಸಲುತೀರ್ಮಾನಕೈಗೊಂಡಿತು. ಬಳಿಕ ಕಾಂಗ್ರೆಸ್ಸಿನ ಧರ್ಮಸಿಂಗ್ ಮುಖ್ಯಮಂತ್ರಿಯಾಗಿದ್ದಸಂದರ್ಭಕೆ.ಸಿ.ರೆಡ್ಡಿ ನೇತೃತ್ವದಲ್ಲಿ ಸಮಿತಿರಚನೆ, ಹೀಗೆ ವಿವಿಧ ಹಂತದಲ್ಲಿಯೋಜನೆಜಾರಿಗೆಕಾಂಗ್ರೆಸ್ ಸರ್ಕಾರ ಶ್ರಮಿಸಿದೆ.ಆದರೆ 2009ರ ಲೋಕಸಭೆಚುನಾವಣೆ ಸಂದರ್ಭದಲ್ಲಿರಾಜಕೀಯ ಲಾಭ ಪಡೆಯಲುಚಿತ್ರದುರ್ಗದ ಒನಕೆ ಓಬವ್ವಕ್ರೀಡಾಂಗಣದಲ್ಲಿ ನಡೆದಿದ್ದಕನ್ನಡ ಸಾಹಿತ್ಯ ಸಮ್ಮೇಳನದ ಕಾರ್ಯಕ್ರಮದ ಬಳಿಕ ಅದೇ ವೇದಿಕೆಯಲ್ಲಿ ಬಿಜೆಪಿ ಸರ್ಕಾರತರಾತುರಿಯಲ್ಲಿಗುದ್ದಲಿ ಪೂಜೆ ನೆರವೇರಿಸಿತು.ಆದರೆ, ಒಂದು ಬಿಡಿಗಾಸು ನೀಡದೆಯೋಜನೆಗೆ ಚಾಲನೆ ನೀಡಿದ್ದು ಬಹುದೊಡ್ಡ ವಂಚನೆ ಆಗಿತ್ತುಎಂದುದೂರಿದರು.2013ರಲ್ಲಿ ಸಿದ್ದರಾಮಯ್ಯ ಮುಖ್ಯಮಂತ್ರಿಯಾದ ಬಳಿಕ ಯೋಜನೆಗೆ ಹೇರಳವಾಗಿ ಹಣ ನೀಡಿದರು.ಪರಿಣಾಮಕಾಮಗಾರಿತ್ವರಿತವಾಗಿ ಆರಂಭಗೊಂಡಿತು.ಆದರೆ, ಈ ಯೋಜನೆ ವಿಷಯದಲ್ಲಿ ಬಿಜೆಪಿ ನಾಯಕರು ಕೇವಲ ಸುಳ್ಳು ಹೇಳಿಕೊಂಡು, ಜನರನ್ನು ವಂಚಿಸುವ ಕೆಲಸ ಮಾಡುತ್ತಿದ್ದಾರೆ.ಭದ್ರಾಕಾಮಗಾರಿಯಲ್ಲೂ ಬಿಜೆಪಿಯವರುಕಮಿಷನ್ ಪಡೆದಿರುವುದುಜಗಜ್ಜಾಹಿರಾಗಿದೆಎಂದು ಆರೋಪಿಸಿದರು. ಇನ್ನೂ ಭದ್ರೆಗೆರಾಷ್ಟ್ರೀಯಯೋಜನೆ ಮಾನ್ಯತೆ ನೀಡಿದೇವುಎಂದು ಬಿಜೆಪಿಯವರೇ ಹೇಳಿದರು, ಜೊತೆಗೆ 5300 ಕೋಟಿರೂ. ಅನುದಾನ ಬಜೆಟ್‌ನಲ್ಲಿಘೋಷಣೆ ಮಾಡಿದರು.ಆದರೆ, ಇದ್ಯಾವುದು ಆಗಲಿಲ್ಲ. ಒಂದುರೀತಿಜಿಲ್ಲೆಯಜನರನ್ನು ವಂಚಿಸುವ ಕೆಲಸ ಮಾಡಿದರುಎಂದು ಟೀಕಿಸಿದರು.

ಈಗ ಮತ್ತೊಮ್ಮೆಜಿಲ್ಲಾಯ 'ರಾದ್ಯಂತಯೋಜನೆ ವಿಷಯದಲ್ಲಿ ಸುಳ್ಳು ಹೇಳಿಕೊಂಡು ತಿರುಗುತ್ತಿದ್ದು, ತಾಯಿ ಭದ್ರೆ ಮತ್ತುಜಿಲ್ಲೆಯಜನರುಇದನ್ನು ಸಹಿಸುವುದಿಲ್ಲ ಎಂದರು.

# ಅಂತಿಮ ಕಣದಲ್ಲಿ 30 ಅಭ್ಯರ್ಥಿ: ಚುನಾವಣಾಧಿಕಾರಿ

» ದಾವಣಗೆರೆ

ದಾವಣಗೆರೆ ಲೋಕಸಭಾ ಚುನಾವಣಾ ಕಣದಲ್ಲಿ ಅಂತಿಮವಾಗಿ 30 ಅಭ್ಯರ್ಥಿಗಳಿದ್ದು ಎಲ್ಲಾ ಅಭ್ಯರ್ಥಿಗಳಿಗೂ ಕ್ರಮಸಂಖ್ಯೆ ಹಾಗೂ ಪಕ್ಷವಾರು ಚಿಹ್ನೆಯನ್ನು ಹಂಚಿಕೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಚುನಾವಣಾಧಿಕಾರಿ ಡಾ.ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ.

ಕ್ರಮ ಸಂಖ್ಯೆವಾರು ಅಭ್ಯರ್ಥಿಗಳ ಹೆಸರು, ಪಕ್ಷ, ಚಿಹ್ನೆಯ ವಿವರ; ಮಾನ್ಯತೆ ಪಡೆದ ರಾಷ್ಟ್ರೀಯ ಮತ್ತು ರಾಜ್ಯ ರಾಜಕೀಯ ಪಕ್ಷಗಳ ಅಭ್ಯರ್ಥಿಗಳು; 1. ಗಾಯಿತ್ರಿ ಸಿದ್ದೇಶ್ವರ ಭಾರತೀಯ ಜನತಾ ಪಾರ್ಟಿ ಕಮಲ, 2. ಡಾ. ಪ್ರಭಾ ಮಲ್ಲಿಕಾರ್ಜುನ್, ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಕೈ, 3. ಡಿ.ಹನುಮಂತಪ್ಪ ಬಹುಜನ ಸಮಾಜ ಪಾರ್ಟಿ ಆನೆ,

ನೋಂದಾಯಿತ ರಾಜಕೀಯ ಪಕ್ಷಗಳ ಅಭ್ಯರ್ಥಿಗಳು; (ಮಾನ್ಯತೆ ಪಡೆದ ರಾಷ್ಟ್ರೀಯ ಮತ್ತು ರಾಜ್ಯ ರಾಜಕೀಯ ಪಕ್ಷಗಳನ್ನು ಹೊರತುಪಡಿಸಿ) 4. ಈಶ್ವರ ಶೇಂಗಾ ಉತ್ತಮ ಪ್ರಜಾಕೀಯ ಪಾರ್ಟಿ, ಚಪ್ಪಲಿಗಳು, 5.ಅಣಬೇರು ತಿಪ್ಪೇಸ್ವಾಮಿ, ಸೋಷಿಯಲಿಸ್ಟ್ ಯುನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಸ್ಟ್), ಆಟೋ-ರಿಕ್ಷಾ, 6. ಎಂ.ಪಿ.ಖಲಂದರ್, ಕಂಟ್ರಿ ಸಿಟಿಜನ್ ಪಾರ್ಟಿ, ತೆಂಗಿನ ತೋಟ, 7. ದೊಡ್ಡೇಶಿ ಹೆಚ್.ಎಸ್,ಜನಹಿತ ಪಕ್ಷ,ಸ್ಟೆತೋಸ್ಕೋಪ್, 8.ರುದ್ರೇಶ್ ಕೆ.ಹೆಚ್, ಸಮಾಜ ವಿಕಾಸ ಕ್ರಾಂತಿ ಪಾರ್ಟಿ, ವಿದ್ಯುತ್ ಕಂಬ, 9. ವಿರೇಶ್.ಎಸ್ (ಲಯನ್ ವಿರೇಶ್) ರಾಣಿ ಚೆನ್ನಮ್ಮ ಪಾರ್ಟಿ, ಉಂಗುರ, 10. ಕೆ.ಎಸ್.ವೀರಭದ್ರಪ್ಪ, ಕರ್ನಾಟಕ ರಾಷ್ಟ್ರ ಸಮಿತಿ, ಬ್ಯಾಟರಿ ಟಾರ್ಚ್, 11. ಎಂ.ಜಿ.ಶ್ರೀಕಾಂತ್, ನವಭಾರತ ಸೇನಾ, ಬೆಂಕಿ ಪೊಟ್ಟಣ, 12. ಎಂ.ಸಿ.ಶ್ರೀನಿವಾಸ್, ಭಾರತೀಯ ಪ್ರಜಾಗಳ ಕಲ್ಯಾಣ ಪಕ್ಷ, ಏಳು ಕಿರಣಗಳಿರುವ ಪೆನ್ನಿನ ನಿಬ್.

ಇತರೆ ಅಭ್ಯರ್ಥಿಗಳು; 13. ಅಬ್ದುಲ್ ನಜೀರ್ ಅಹಮೆದ್, ಪಕ್ಷೇತರ ರೋಡ್ ರೋಲರ್, 14. ಎ.ಕೆ.ಗಣೇಶ್, ಪಕ್ಷೇತರ ಚಕ್ಕಿ, 15. ಜಿ.ಎಂ.ಗಾಯಿತ್ರಿ ಸಿದ್ದೇಶಿ, ಪಕ್ಷೇತರ ಹೂಕೋಸು, 16. ಟಿ.ಚಂದ್ರು, ಪಕ್ಷೇತರ ಗ್ರಾಮಫೋನ್, 17. ಟಿ.ಜಬೀನಾ ಆಪಾ, ಪಕ್ಷೇತರ ಕಲ್ಲಂಗಡಿ, 18. ತಸ್ಲೀಮ್ ಬಾನು, ಪಕ್ಷೇತರ ಬ್ಯಾಟ್, 19. ಪರವೀಜ್ ಹೆಚ್, ಪಕ್ಷೇತರ ವಜ್ರ, 20. ಪೆದ್ದಪ್ಪ.ಎಸ್, ಪಕ್ಷೇತರ ಕೇರಂಬೋರ್ಡ್, 21. ಬರಕಲ್ ಅಲಿ, ಪಕ್ಷೇತರ ಅಲಮಾರು, 22. ಜಿ.ಎಂ.ಬರ್ಕತ್ ಅಲಿ ಬಾಷ, ಪಕ್ಷೇತರ ಗಿಫ್ಟ್‌ಪ್ಯಾಕ್, 23. ಮಹಬೂಬ್ ಬಾಷ, ಪಕ್ಷೇತರ ಸ್ಪಾನರ್, 24. ಮೊಹ್ಮದ್ ಹಯಾತ್.ಎಂ, ಪಕ್ಷೇತರ ಬ್ಯಾಟ್ಸ್‌ಮನ್, 25. ಮಂಜು ಮಾರಿಕೊಪ್ಪ, ಪಕ್ಷೇತರ ಟ್ರಕ್, 26. ರವಿನಾಯ್ಕ.ಬಿ, ಪಕ್ಷೇತರ ಕರಣೆ, 27. ರಷೀದ್ ಖಾನ್, ಪಕ್ಷೇತರ ದೂರವಾಣಿ, 28. ಜಿ.ಬಿ.ವಿನಯ್ ಕುಮಾರ್, ಪಕ್ಷೇತರ ಗ್ಯಾಸ್ ಸಿಲಿಂಡರ್, 29. ಸಲೀಂ.ಎಸ್, ಪಕ್ಷೇತರ ಪೆನ್‌ಡ್ರೈವ್ ಹಾಗೂ 30. ಸೈಯದ್ ಜಬೀವುಲ್ಲಾ.ಕೆ, ಪಕ್ಷೇತರ ಅಭ್ಯರ್ಥಿ ಬಕೆಟ್ ಚಿಹ್ನೆಯಾಗಿದೆ.



## 85 ವರ್ಷ ಮೇಲ್ಪಟ್ಟ ಹಿರಿಯ ನಾಗರೀಕರಿಗೆ ಮನೆಯಲ್ಲಿಯೇ ಮತದಾನ

**ದಾವಣಗೆರೆ:** ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ದೇಶದ ಮೂರನೇ ಹಂತ, ರಾಜ್ಯದಲ್ಲಿ ಎರಡನೇ ಹಂತದಲ್ಲಿ ಚುನಾವಣೆ ನಡೆಯುತ್ತಿದ್ದು 85 ವರ್ಷ ಮೇಲ್ಪಟ್ಟ ಹಿರಿಯ ನಾಗರೀಕರು ಹಾಗೂ ವಿಶೇಷಚೇತನರು ಮನೆಯಲ್ಲಿಯೇ ಮತದಾನ ಮಾಡಲು ಚುನಾವಣಾ ಆಯೋಗ ಅವಕಾಶ ಮಾಡಿಕೊಟ್ಟಿದೆ. ದಾವಣಗೆರೆ ಕ್ಷೇತ್ರದಲ್ಲಿ ಮನೆಯಲ್ಲಿಯೇ ಮತದಾನ ಮಾಡುವ ಪ್ರಕ್ರಿಯೆಯು ಏಪ್ರಿಲ್ 25 ರಿಂದ 27 ರ ವರೆಗೆ ಬೆಳಗ್ಗೆ 9 ರಿಂದ ಸಂಜೆ 5 ಗಂಟೆಯವರೆಗೆ ಕ್ಷೇತ್ರ ವ್ಯಾಪ್ತಿಯಲ್ಲಿ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ.ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ. ಮೊದಲ ಹಂತದಲ್ಲಿ ಏಪ್ರಿಲ್ 25 ರಿಂದ 27 ರ ಬೆಳಗ್ಗೆ 9 ರಿಂದ ಸಂಜೆ 5 ಗಂಟೆಯವರೆಗೆ ಮತಪತ್ರದ ಮೂಲಕ ಗೃಹ ಮತದಾನ ನಡೆಯಲಿದ್ದು ಮತದಾನ ಮಾಡಲು ಸಾಧ್ಯವಾಗದ ಸಂದರ್ಭದಲ್ಲಿ ಏಪ್ರಿಲ್ 27 ರಂದು ಕೊನೆಯ ಭೇಟಿ ನೀಡಿ ಮನೆಯಲ್ಲಿಯೇ ಮತದಾನ ಮಾಡಿಸಲಾಗುತ್ತದೆ. ಮನೆಯಲ್ಲಿಯೇ ಮತದಾನಕ್ಕೆ ಪ್ರತಿ ಮಾರ್ಗಕ್ಕೆ ಮತಗಟ್ಟೆ ಅಧಿಕಾರಿ, ಸಿಬ್ಬಂದಿ, ರಕ್ಷಣಾ ಸಿಬ್ಬಂದಿ ಮತ್ತು ಪೂರಕ ಸದಸ್ಯರನ್ನು ಒಳಗೊಂಡ ತಂಡ ಮನೆಗೆ ಬಂದು ಮತದಾನ ಮಾಡಿಸಲಿದೆ. ಮತದಾನದ ವೇಳೆ ಮತದಾನದ ಪಾವಿತ್ರ್ಯತೆಯೊಂದಿಗೆ ಗೌಪ್ಯತೆಗೆ ಧಕ್ಕೆಯಾಗದಂತೆ ಕ್ರಮ ವಹಿಸಲಾಗುತ್ತದೆ. ಈ ದಿನಗಳಂದು ಮನೆಯಲ್ಲಿಯೇ ಇದ್ದು ಮತದಾನ ಮಾಡಬೇಕೆಂದು ಜಿಲ್ಲಾಧಿಕಾರಿ ಕೋರಿದ್ದಾರೆ.ಮನೆಯಲ್ಲಿಯೇ ಮತದಾನದ ವಿವರ; ದಾವಣಗೆರೆ ಕ್ಷೇತ್ರದಲ್ಲಿ 85 ವರ್ಷ ಮೇಲ್ಪಟ್ಟ 12845 ಮತದಾರರಿದ್ದು ಇದರಲ್ಲಿ ಮನೆಯಲ್ಲಿಯೇ ಮತದಾನ ಮಾಡಲು 1458 ಹಿರಿಯ ನಾಗರೀಕರು ಒಪ್ಪಿಗೆ ನೀಡಿದ್ದಾರೆ. ಮತ್ತು 22922 ವಿಶೇಷಚೇತನ ಮತದಾರರಲ್ಲಿ 804 ಮತದಾರರು ಮನೆಯಲ್ಲಿಯೇ ಮತದಾನ ಮಾಡಲು ಒಪ್ಪಿಗೆ ನೀಡಿದ್ದು ಇವರಿಗೆ ಮತದಾನ ಮಾಡಿಸಲಾಗುತ್ತದೆ. ಈಗಾಗಲೇ ಒಪ್ಪಿಗೆ ನೀಡಿದ ಮತದಾರರು ಮತಗಟ್ಟೆಯಲ್ಲಿ ಮತದಾನ ಮಾಡಲು ಅವಕಾಶ ಇರುವುದಿಲ್ಲ. ಹಿರಿಯ ನಾಗರೀಕರು 85 ವರ್ಷ ಮೇಲ್ಪಟ್ಟು ಜಗಳೂರು 202, ಹರಪನಹಳ್ಳಿ 163, ಹರಿಹರ 123, ದಾವಣಗೆರೆ ಉತ್ತರ 264, ದಕ್ಷಿಣ 100, ಮಾಯಕೊಂಡ 16, ಚನ್ನಗಿರಿ 204, ಹೊನ್ನಾಳಿ 386 ಸೇರಿ 1458, ವಿಶೇಷಚೇತನರು; ಜಗಳೂರು 119, ಹರಪನಹಳ್ಳಿ 75, ದಾವಣಗೆರೆ ಉತ್ತರ 112, ದಕ್ಷಿಣ 88, ಮಾಯಕೊಂಡ 6, ಚನ್ನಗಿರಿ 98, ಹೊನ್ನಾಳಿ 230 ಸೇರಿ ಒಟ್ಟು 804 ಮತದಾರರು ಮನೆಯಲ್ಲಿ ಮತದಾನ ಮಾಡಲು 12ಡಿ ರಲ್ಲಿ ಘೋಷಣೆ ಮಾಡಿಕೊಂಡಿದ್ದಾರೆ.

## ಫಾಸ್ಟ್ ನ್ಯೂಸ್

### ಬಿಜೆಪಿ ಬೆಂಬಲಿಸುವಂತೆ ಮಾಜಿ ಶಾಸಕ ಮನವಿ



» ಚಿತ್ರದುರ್ಗ

ದೇಶದ ಭವಿಷ್ಯದ ಬಗ್ಗೆ ದೂರದೃಷ್ಟಿಯಿಟ್ಟುಕೊಂಡಿರುವ ನರೇಂದ್ರಮೋದಿ ಮೂರನೆ ಬಾರಿಗೆ ಪ್ರಧಾನಿಯಾಗಬೇಕಾಗಿರುವುದ 'ರಿಂದ ಈ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳರವರನ್ನು ಬೆಂಬಲಿಸುವಂತೆ ಮಾಜಿ ಶಾಸಕ ರಾಮಯ್ಯ ಮತದಾರರಲ್ಲಿ ಮನವಿ ಮಾಡಿದರುಪತ್ರಕರ್ತರ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ರಾಜ್ಯ ಕಾಂಗ್ರೆಸ್ ಸರ್ಕಾರ ಜನತೆಗೆ ಕೊಟ್ಟಿರುವ ಐದು ಗ್ಯಾರೆಂಟಿಗಳು ಶಾಶ್ವತವಲ್ಲ. ದೇಶಕ್ಕಾಗಿ ಮೋದಿ ಗ್ಯಾರೆಂಟಿ. ಹತ್ತು ವರ್ಷಗಳ ಕಾಲ ಪ್ರಧಾನಿಯಾಗಿ ಆಡಳಿತ ನಡೆಸಿದ ನರೇಂದ್ರಮೋದಿಯಿಂದ ಯಾರಿಗೂ ತೊಂದರೆಯಾಗಿಲ್ಲ. ಕಾಂಗ್ರೆಸ್ ಪಕ್ಷ ಮಾದಿಗರನ್ನು ಕಡೆಗಣಿಸಿದೆ. ಆದ್ದರಿಂದ ಬಿಜೆಪಿ.ಯನ್ನು ಬೆಂಬಲಿಸಲು ತೀರ್ಮಾನಿಸಿದ್ದೇವೆಂದು ಹೇಳಿದರು. ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಹೆಚ್.ಹನುಮಂತಪ್ಪ ಮಾತನಾಡಿ ಹಿರಿಯ ಅನುಭವಿ ರಾಜಕಾರಣಿ ಗೋವಿಂದ ಕಾರಜೋಳರವರಿಗೆ ಈ ಬಾರಿಯ ಚುನಾವಣೆಯಲ್ಲಿ ನಮ್ಮ ಬೆಂಬಲವಿದೆ.

# ಕಾರಜೋಳ ಪರ ಕೆ.ಎಸ್.ನವೀನ್ ಮತಯಾಚನೆ



» ಚಿತ್ರದುರ್ಗ

ಒಳ ಮೀಸಲಾತಿ ಜಾರಿಯಿಂದ ದೊಡ್ಡ ಸಂಖ್ಯೆಯಲ್ಲಿರುವ ಮಾದಿಗರಿಗೆ ಅನುಕೂಲವಾಗಲಿದೆ ಎನ್ನುವುದನ್ನು ಮನದಲ್ಲಿಟ್ಟುಕೊಂಡು ನಾಳೆ ನಡೆಯಲಿರುವ ಲೋಕಸಭೆ ಚುನಾವಣೆಯಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಿರುವ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳರವರಿಗೆ ಮತ ನೀಡಿ ಗೆಲ್ಲಿಸಿ ಎಂದು ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಮಾದಿಗ ಜನಾಂಗದವರಲ್ಲಿ ಮನವಿ ಮಾಡಿದರು. ನಗರದ ಜೆ.ಜೆ. ಹಟ್ಟಿಯಲ್ಲಿ ಬುಧವಾರ ಮತಯಾಚಿಸಿ ಮಾತನಾಡಿದ ಅವರು ಆರು ಬಾರಿ ಶಾಸಕರಾಗಿ ರಾಜ್ಯದ ಉಪಮುಖ್ಯಮಂತ್ರಿಯಾಗಿ ಸಾಕಷ್ಟು ಅನುಭವವಿರುವ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳರವರಿಗೆ ನಿಮ್ಮ ಅಮೂಲ್ಯವಾದ ಮತ ಹಾಕಿದರೆ ಕ್ಷೇತ್ರ ಅಭಿವೃದ್ಧಿಯಾಗಲಿದೆ. ಕಾಂಗ್ರೆಸ್ನ ಬಿ.ಎನ್.ಚಂದ್ರಪ್ಪನವರನ್ನು ಗೆಲ್ಲಿಸಿದರೆ ಸಂಸತ್ನಲ್ಲಿ ವಿರೋಧ ಪಕ್ಷದಲ್ಲಿ ಕೂರುತ್ತಾರೆ. ಹಾಗಾಗಿ ನಿಮ್ಮ ಮತ ಕಸದ ಬುಟ್ಟಿ ಸೇರಿದಂತಾಗುತ್ತದೆ. ಎಚ್ಚರಿಕೆಯಿಂದ ಮತ ಚಲಾಯಿಸಿ ಎಂದು ವಿನಂತಿಸಿದರು.

ಗೋವಿಂದ ಕಾರಜೋಳರವರನ್ನು ಗೆಲ್ಲಿಸಿ ಸಂಸತ್ಗೆ ಕಳಿಸಿದರೆ ಪ್ರಧಾನಿ ಜೊತೆ ಕುಳಿತುಕೊಳ್ಳುತ್ತಾರೆ. ಕಾಂಗ್ರೆಸ್ನ ಬಿ.ಎನ್.ಚಂದ್ರಪ್ಪ ಗೆದ್ದರೆ ಯಾರ ಕೈಗೂ ಸಿಗಲ್ಲ. ಮಾದಿಗ ಸಮಾಜಕ್ಕೆ ಸಾಮಾಜಿಕ ನ್ಯಾಯ ಕೊಡಿಸಬೇಕೆಂಬ ಉದ್ದೇಶವಿಟ್ಟುಕೊಂಡು ಗೋವಿಂದ ಕಾರಜೋಳರವರವನ್ನು ಕರೆದುಕೊಂಡು ಬಂದು ಚಿತ್ರದುರ್ಗ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಲು ಅವಕಾಶ ಮಾಡಿಕೊಟ್ಟಿದ್ದೇವೆ. ಕಾಂಗ್ರೆಸ್ನ ಐದು ಗ್ಯಾರೆಂಟಿಗಳು ಯಾವಾಗ ನಿಲ್ಲುತ್ತವೋ ಗೊತ್ತಿಲ್ಲ. ಒಂದು ಕೈಯಲ್ಲಿ ಕೊಟ್ಟು ಮತ್ತೊಂದು ಕೈಯಲ್ಲಿ ಕಸಿಯುವ ಹುನ್ನಾರ ಮಾಡುತ್ತಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಗ್ಯಾರೆಂಟಿಗಳಿಗೆ ಮೋಸ ಹೋಗದಿರಿ ಎಂದು ಕೆ.ಎಸ್.ನವೀನ್ ಮಾದಿಗರನ್ನು ಎಚ್ಚರಿಸಿದರು.ಒಳ ಮೀಸಲಾತಿ ನಿಮ್ಮ ಮಕ್ಕಳ ಶಿಕ್ಷಣ ಹಾಗೂ ಉದ್ಯೋಗಕ್ಕೆ ಊರುಗೋಲಾಗಲಿದೆ. ಕಾಂಗ್ರೆಸ್ ಒಳ ಮೀಸಲಾತಿಯನ್ನು ವಿರೋಧಿಸುತ್ತಿದೆ ಎನ್ನುವುದು ನಿಮಗೆ ಗೊತ್ತಿರಲಿ. ಪ್ರಧಾನಿ ನರೇಂದ್ರಮೋದಿ ನಿಮ್ಮ ಸಮಾಜಕ್ಕೆ ಅನುಕೂಲವಾಗಲಿ ಎನ್ನುವ ಕಾರಣಕ್ಕಾಗಿ ಒಳ ಮೀಸಲಾತಿ ಜಾರಿಗೊಳಿಸಲು ಮುಂದಾಗಿದ್ದಾರೆ. ಕೋವಿಡ್ ಸಂದರ್ಭದಲ್ಲಿ ದೇಶದ ನೂರ ನಲವತ್ತು ಕೋಟಿ ಜನರಿಗೆ ಉಚಿತ ಲಸಿಕೆ ಕೊಡಿಸಿದ್ದರಿಂದ ಸಾವು-ನೋವಿನ ಪ್ರಮಾಣ ಕಡಿಮೆಯಾಗಿದೆ. ಮುಂದುವರೆದ ಬೇರೆ ಬೇರೆ ದೇಶಗಳಲ್ಲಿ ಹಣ ಪಡೆಸು ಲಸಿಕೆ ನೀಡಲಾಗಿದೆ. ಇವೆಲ್ಲಾ ಅಂಶವನ್ನು ಗಮನದಲ್ಲಿಟ್ಟುಕೊಂಡು ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳರಿಗೆ ಮತ ನೀಡಿ ಎಂದು ಕೆ.ಎಸ್.ನವೀನ್ ಕೋರಿದರು. ಮಾಧ್ಯಮ ವಕ್ತಾರ ದಗ್ಗೆಶಿವಪ್ರಕಾಶ್, ನಾಗರಾಜ್ಬೇದ್ರೆ, ಎಸ್ಟಿ. ಮೋರ್ಚಾದ ಜಿಲ್ಲಾಧ್ಯಕ್ಷ ಶಿವಣ್ಣ, ಎಸ್ಸಿ. ಮೋರ್ಚಾದ ಕಿರಣ್ ಡಿ.ಎಸ್.ಹಳ್ಳಿ, ಮಾದಿಗ ಸಮುದಾಯದ ಮುಖಂಡರುಗಳಾದ ಮಂಜು, ಮೈಲಾರಿ, ನವೀನ್, ತಿಪ್ಪಣ್ಣ, ಅರುಣ್, ಶಿವು ಇವರುಗಳು ಮತಯಾಚನೆಯಲ್ಲಿದ್ದರು.




Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T